ಸಂಪುಟ: 11 ಸಂಚಿಕೆ: 188 ಪುಟ: 4+2 ಬೆಲೆ : 3.00 ಭಾನುವಾರ, ಆಗಸ್ಟ್ 30, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 188 Pages : 4+2 Rate : 3.00 Sunday , August 30, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ಬರ ಪರಿಸ್ಥಿತಿ, ಬೆಳೆ ಹಾನಿ, ಕುಡಿಯುವ ನೀರಿನ ಸಮಗ್ರ ವರದಿ ಸಿದ್ಧಪಡಿಸಲು ಜಿಲ್ಲಾಧಿಕಾರಿ ಸೂಚನೆ

# ಸೆ.1ರಂದು ಗದಗಕ್ಕೆ ಮುಖ್ಯಮಂತ್ರಿ ಭೇಟಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸೆಪ್ಟೆಂಬರ್ 1ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಗದಗ ಜಿಲ್ಲೆಗೆ ಭೇಟಿ ನೀಡಿ ಜಿಲ್ಲೆಯ ಬರ ಪರಿಸ್ಥಿತಿಯ ಕುರಿತು ಮಹತ್ವದ ಅವಲೋಕನ ಸಭೆ ನಡೆಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಪೂರ್ವಸಿದ್ಧತಾ ಸಭೆ ನಡೆಯಿತು.

ಮುಖ್ಯಮಂತ್ರಿಗಳು ಸೆ.1ರಂದು ಹುಬ್ಬಳ್ಳಿಯಿಂದ ಗದಗಕ್ಕೆ ಆಗಮಿಸಿ ಜಿಲ್ಲೆಯ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಮಗ್ರ ಪರಿಶೀಲನಾ ಸಭೆ ನಡೆಸಲಿದ್ದಾರೆ. ಬಳಿಕ ಬರಪೀಡಿತ ಪ್ರದೇಶಗಳ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಲಿದ್ದು, ನಂತರ ಲಕ್ಷ್ಮೇಶ್ವರಕ್ಕೆ ತೆರಳಲಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಪ್ರವಾಸದ ಎಲ್ಲ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚಿಸಿದರು.



ಮುಖ್ಯಮಂತ್ರಿಗಳ ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಎಲ್ಲ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ತಮ್ಮ ಇಲಾಖೆಗೆ ಸಂಬಂಧಿಸಿದ ಅಗತ್ಯ ಮಾಹಿತಿ ಮತ್ತು ದಾಖಲೆಗಳೊಂದಿಗೆ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

ಬರ ಪರಿಸ್ಥಿತಿ ಅವಲೋಕನ ಸಭೆಗೆ ಸಂಬಂಧಿಸಿದಂತೆ ಕುಡಿಯುವ ನೀರು, ಕೃಷಿ, ಬೆಳೆ ಹಾನಿ, ಬರ ನಿರ್ವಹಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು

> **ಮುಖ್ಯಮಂತ್ರಿಗಳ ಬರ ಪರಿಸ್ಥಿತಿ ಅವಲೋಕನ ಸಭೆಗೆ ಎಲ್ಲ ಇಲಾಖೆಗಳ ಅಧಿಕಾರಿಗಳು ಸಂಪೂರ್ಣ ಹಾಗೂ ನಿಖರ ಮಾಹಿತಿಯೊಂದಿಗೆ ಅಗತ್ಯ ದಾಖಲೆಗಳನ್ನು ಸಿದ್ಧಪಡಿಸಿಕೊಂಡು ಕಡ್ಡಾಯವಾಗಿ ಹಾಜರಾಗಬೇಕು. ಪ್ರವಾಸದ ಎಲ್ಲ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು.**
>
> **- ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ**

ಸಂಪೂರ್ಣ ಹಾಗೂ ನಿಖರ ಮಾಹಿತಿಯನ್ನು ಸಿದ್ಧಪಡಿಸಿಕೊಳ್ಳಬೇಕು. ಯಾವುದೇ ಇಲಾಖೆಯ ಮಾಹಿತಿಯಲ್ಲಿ ಲೋಪವಾಗದಂತೆ ಅಧಿಕಾರಿಗಳು ಅಗತ್ಯ ದಾಖಲೆಗಳೊಂದಿಗೆ ಸಜ್ಜಾಗಬೇಕು ಎಂದು ಸೂಚಿಸಿದರು. ಅಲ್ಲದೆ, ಭಾರತ್ ಜೋಡೋ ಯುವ ಸಂಘಗಳು, ಪ್ರಜಾ ಸೇವೆ ಹಾಗೂ ಪ್ರತಿ ಶನಿವಾರ ನಡೆಯುವ ಜನಸ್ಪಂದನ ಸಭೆಗಳಿಗೆ ಸಂಬಂಧಿಸಿದ ಮಾಹಿತಿಯನ್ನೂ ಸಂಬಂಧಿಸಿದ ಅಧಿಕಾರಿಗಳು ಸಿದ್ಧಪಡಿಸಿಕೊಂಡು ಬರಬೇಕು ಎಂದು ತಿಳಿಸಿದರು.

**ಶಿಷ್ಟಾಚಾರ, ಸಂಚಾರ ವ್ಯವಸ್ಥೆಗೆ ಆದ್ಯತೆ**

ಮುಖ್ಯಮಂತ್ರಿಗಳ ಕಾರ್ಯಕ್ರಮದ ಸಂದರ್ಭದಲ್ಲಿ ಶಿಷ್ಟಾಚಾರವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮುಖ್ಯಮಂತ್ರಿಗಳು ಗದಗ ಜಿಲ್ಲೆಯ ಪ್ರವಾಸ ಪೂರ್ಣಗೊಳಿಸಿ ತೆರಳುವವರೆಗೆ ಯಾವುದೇ ರೀತಿಯ ಸಂಚಾರ ವ್ಯತ್ಯಯ ಉಂಟಾಗದಂತೆ ಸಂಬಂಧಿತ ಇಲಾಖೆಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಮುಖ್ಯಮಂತ್ರಿಗಳ ಪ್ರವಾಸದ ಸಂದರ್ಭದಲ್ಲಿ ಶಿಷ್ಟಾಚಾರ ಪಾಲನೆಗೆ ಪ್ರಮುಖ ಆದ್ಯತೆ ನೀಡಲಾಗುವುದು. ಸಂಚಾರ ವ್ಯವಸ್ಥೆ ಸುಗಮವಾಗಿರುವಂತೆ ಪೊಲೀಸ್ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು. ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಅವರು ಮುಖ್ಯಮಂತ್ರಿಗಳ ಪ್ರವಾಸದ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವರವಾದ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಡಿಡಿಎಲ್ಆರ್ ಜಿ.ಜೆ. ರುದ್ರಣ್ಣಗೌಡ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ್ ಸೋಮನಕಟ್ಟಿ, ಡಿಡಿಪಿಐ ಆರ್.ಎಸ್. ಬುರಡಿ, ಆರ್‌ಟಿಒ ವಿಶಾಲ್, ರಾಜಾರಾಮ ಪವಾರ್, ವಸಂತ ಮಡ್ಲೂರ, ಕೊಟ್ರೇಶ್ ವಿಭೂತಿ, ಶರಣು ಗೋಗೇರಿ, ಡಾ. ಎಚ್.ಬಿ. ಹುಲಗಣ್ಣವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## 11 ವರ್ಷಗಳ ಅಕ್ಕ ತಮ್ಮನ ಬಾಂಧವ್ಯಕ್ಕೆ ರಾಖಿಯ ಬೆಸುಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರೀತಿ, ವಿಶ್ವಾಸ ಮತ್ತು ಅಕ್ಕತಮ್ಮನ ಬಾಂಧವ್ಯದ ಪ್ರತೀಕವಾದ ರಕ್ಷಾ ಬಂಧನ ಹಬ್ಬವನ್ನು ಗದಗದ ಹುಯಿಲಗೋಳ ಆಸ್ಪತ್ರೆಯ ವೈದ್ಯರಾದ ಡಾ. ಸಂತೋಷ ಹುಯಿಲಗೋಳ ಹಾಗೂ ಡಾ. ರೂಪಾ ಹುಯಿಲಗೋಳ ಅವರ ಸುಪುತ್ರ ಸಕ್ಷಮ್ ಮತ್ತು ರಾಧಾ ಕಡ್ಲಿಮಟ್ಟಿ ಅವರು ವಿಶೇಷವಾಗಿ ಆಚರಿಸಿದರು. ರಾಧಾ ಕಡ್ಲಿಮಟ್ಟಿ ಅವರು ಸಕ್ಷಮ್‌ಗೆ ರಾಖಿ ಕಟ್ಟಿ, ಸಿಹಿ ಹಂಚುವ ಮೂಲಕ ರಕ್ಷಾ ಬಂಧನದ ಸಂಭ್ರಮವನ್ನು ಆಚರಿಸಿದರು. ಕಳೆದ 11 ವರ್ಷಗಳಿಂದ ಪ್ರೀತಿಯ ಅಕ್ಕತಮ್ಮನಂತೆ ಬಾಂಧವ್ಯ ಹೊಂದಿರುವ ರಾಧಾ ಮತ್ತು ಸಕ್ಷಮ್ ಅವರು ಪ್ರತಿವರ್ಷವೂ ರಕ್ಷಾ ಬಂಧನ ಹಬ್ಬವನ್ನು ಸಂಭ್ರಮದಿಂದ ಆಚರಿಸಿಕೊಂಡು ಬರುತ್ತಿದ್ದಾರೆ.

ರಕ್ತಸಂಬಂಧಕ್ಕಿಂತಲೂ ಮಿಗಿಲಾದ ಪ್ರೀತಿ, ವಿಶ್ವಾಸ ಮತ್ತು ಆತ್ಮೀಯತೆಯ ಬಂಧಕ್ಕೆ ಈ ರಕ್ಷಾ ಬಂಧನ ಸಾಕ್ಷಿಯಾಗಿದ್ದು, ಅವರ 11 ವರ್ಷಗಳ ಅಕ್ಕತಮ್ಮನ ಬಾಂಧವ್ಯ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ.

### ಸಾಲ ವಸೂಲಾತಿಗೆ ಒತ್ತಡ ಹೇರದಂತೆ ಬ್ಯಾಂಕ್‌ಗಳಿಗೆ ಸೂಚನೆ ನೀಡಲು ಒತ್ತಾಯ

## ಲಕ್ಷ್ಮೇಶ್ವರ: ಬರಪೀಡಿತ ತಾಲೂಕು ಘೋಷಣೆಗೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮರ್ಪಕ ಮಳೆಯಿಲ್ಲದೆ ತಾಲೂಕಿನಾದ್ಯಂತ ಬೆಳೆಗಳು ಒಣಗುತ್ತಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ಸಮಗ್ರ ಬರ ಸಮೀಕ್ಷೆ ನಡೆಸಿ ಲಕ್ಷ್ಮೇಶ್ವರ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಬಿಜೆಪಿ ಮುಖಂಡರು ಸರ್ಕಾರವನ್ನು ಆಗ್ರಹಿಸಿದರು.

ಶಿರಹಟ್ಟಿ ಬಿಜೆಪಿ ಮಂಡಲದ ವತಿಯಿಂದ ಗ್ರೇಡ್2 ತಹಸೀಲ್ದಾರ್ ಮಂಜುನಾಥ ಅಮಾಸಿ ಅವರ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿ, ಲಕ್ಷ್ಮೇಶ್ವರ ತಾಲೂಕಿನ ವಾಸ್ತವ ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಲಾಯಿತು.

ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಡಿ.ವೈ. ಹುನಗುಂದ ಮಾತನಾಡಿ, ಮಳೆಯ ಕೊರತೆಯಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗುತ್ತಿದ್ದು, ನಿರೀಕ್ಷಿತ ಇಳುವರಿ ದೊರೆಯುವ ಸಾಧ್ಯತೆ ಕ್ಷೀಣಿಸಿದೆ. ಕೃಷಿ ಚಟುವಟಿಕೆಗಳಿಗೆ ರೈತರು ಮಾಡಿರುವ ಖರ್ಚು ಕೂಡ ವಾಪಸ್ ಬಾರದಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕೃಷಿ ಹಾಗೂ ಬೆಳೆನಷ್ಟದಿಂದ ರೈತರಿಗೆ ಕೃಷಿ ಸಾಲ, ಬೆಳೆ ಸಾಲ ಸೇರಿದಂತೆ ವಿವಿಧ ಸಾಲಗಳನ್ನು ಸಕಾಲದಲ್ಲಿ ಮರುಪಾವತಿಸಲು ಸಾಧ್ಯವಾಗುತ್ತಿಲ್ಲ.

> **ಲಕ್ಷ್ಮೇಶ್ವರ ತಾಲೂಕಿನ ವಾಸ್ತವ ಬರ ಪರಿಸ್ಥಿತಿಯ ಸಮಗ್ರ ಸಮೀಕ್ಷೆ ನಡೆಸಿ ಕೂಡಲೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ಸಂಕಷ್ಟದಲ್ಲಿರುವ ರೈತರ ಮೇಲೆ ಸಾಲ ಮರುಪಾವತಿಗೆ ಒತ್ತಡ ಹೇರದಂತೆ ಬ್ಯಾಂಕ್‌ಗಳಿಗೆ ಸರ್ಕಾರ ಸೂಚನೆ ನೀಡಬೇಕು.**
>
> **-ಡಿ.ವೈ. ಹುನಗುಂದ,**
> ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ

ಇಂತಹ ಸಂದರ್ಭದಲ್ಲಿ ತಾಲೂಕಿನ ಬರ ಪರಿಸ್ಥಿತಿಯ ಸಮಗ್ರ ಸಮೀಕ್ಷೆ ನಡೆಸಿ, ಲಕ್ಷ್ಮೇಶ್ವರವನ್ನು ಬರಪೀಡಿತ ತಾಲೂಕು ಎಂದು ಘೋಷಿಸಬೇಕು ಎಂದು ಆಗ್ರಹಿಸಿದರು. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳು ತಾಲೂಕಿನ ಬರ ಪರಿಸ್ಥಿತಿಯ ಕುರಿತು ಸಮರ್ಪಕ ಅಧ್ಯಯನ ನಡೆಸಿ ಸರ್ಕಾರಕ್ಕೆ ಮಾಹಿತಿ ನೀಡದಿರುವುದರಿಂದ ಲಕ್ಷ್ಮೇಶ್ವರ ತಾಲೂಕು ಬರಪೀಡಿತ ಪಟ್ಟಿಯಿಂದ ಕೈತಪ್ಪಿದೆ ಎಂದು ಅವರು ಆರೋಪಿಸಿದರು.

ಶಿರಹಟ್ಟಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಮಾತನಾಡಿ, ಬರ ಸಂಕಷ್ಟದ ನಡುವೆಯೂ ಕೆಲವು ಬ್ಯಾಂಕ್ ಅಧಿಕಾರಿಗಳು ರೈತರಿಗೆ ಸಾಲದ ಕಂತು ಹಾಗೂ ಬಾಕಿ ಮೊತ್ತ ಪಾವತಿಸುವಂತೆ ಒತ್ತಡ ಹೇರುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಸಂಕಷ್ಟದಲ್ಲಿರುವ ರೈತರ ಮೇಲೆ ಸಾಲ ವಸೂಲಾತಿಯ ಒತ್ತಡ ಹೇರದಂತೆ ಸರ್ಕಾರ ಬ್ಯಾಂಕ್‌ಗಳಿಗೆ ಸ್ಪಷ್ಟ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ರೈತ ಮೋರ್ಚಾ ತಾಲೂಕು ಅಧ್ಯಕ್ಷ ಅಜ್ಜಪ್ಪ ಹೂಗಾರ ಮಾತನಾಡಿ, ಬೆಳೆನಷ್ಟದ ಕುರಿತು ಗ್ರಾಮವಾರು ಹಾಗೂ ರೈತವಾರು ಸಮೀಕ್ಷೆ ನಡೆಸಿ ಅರ್ಹ ರೈತರಿಗೆ ಬರ ಪರಿಹಾರ ಸೇರಿದಂತೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸಬೇಕು. ಸರ್ಕಾರ ಕೂಡಲೇ ಸ್ಪಂದಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ನೀಲಪ್ಪ ಕರ್ಜಕಣ್ಣವರ, ನಿಂಗಪ್ಪ ಬನ್ನಿ, ನವೀನ ಹಿರೇಮಠ, ನಾಗಯ್ಯ ಮಠಪತಿ, ವೀರೇಶ ಸಾಸಲವಾಡ, ಅನಿಲ ಮುಳಗುಂದ ಸೇರಿದಂತೆ ಹಲವರು ಮಾತನಾಡಿದರು.

ಶಿರಹಟ್ಟಿ ಮಂಡಲ ಪ್ರಧಾನ ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ, ತಾಲೂಕು ಯುವ ಘಟಕ ಅಧ್ಯಕ್ಷ ಬಸವರಾಜ ಚಕ್ರಸಾಲಿ, ಎಂ.ಆರ್. ಪಾಟೀಲ, ನಗರ ಅಧ್ಯಕ್ಷ ವಿಜಯ ಕುಂಬಾರ, ಮಂಜನಗೌಡ ಕೆಂಚನಗೌಡ್ರ, ತುಕ್ಕಪ್ಪ ಪೂಜಾರ, ಪ್ರಕಾಶ ಮಾದನೂರ, ಗಿರೀಶ ಚೌರಡ್ಡಿ, ಜಗದೀಶಗೌಡ ಪಾಟೀಲ, ದುಂಡೇಶ ಕೋಟಗಿ ಸೇರಿದಂತೆ ಬಿಜೆಪಿ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮತದಾರರೇ ಗಮನಿಸಿ: ಹೆಸರು ಪರಿಶೀಲನೆಗೆ ಕೊನೆಯ ಅವಕಾಶ!

**ವಿಜಯಸಾಕ್ಷಿ ಸುದ್ದಿ, ಗದಗ**

2026ನೇ ಸಾಲಿನ ಮತದಾರರ ಪಟ್ಟಿಯ ನಿರಂತರ ಪರಿಷ್ಕರಣೆ ಕಾರ್ಯ ಆರಂಭಗೊಂಡಿದ್ದು, ಕರಡು ಮತದಾರರ ಪಟ್ಟಿಯನ್ನು ಆಗಸ್ಟ್ 24ರಂದು ಪ್ರಕಟಿಸಲಾಗಿದೆ. ಸಾರ್ವಜನಿಕರು ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಪರಿಶೀಲಿಸಿಕೊಳ್ಳುವುದರೊಂದಿಗೆ ಹೊಸದಾಗಿ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಆಕ್ಷೇಪಣೆಗಳನ್ನು ಸಲ್ಲಿಸಲು ಸೆಪ್ಟೆಂಬರ್ 23ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಸಾರ್ವಜನಿಕರ ಅನುಕೂಲಕ್ಕಾಗಿ ಮತಗಟ್ಟೆಗಳಲ್ಲಿ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಆಗಸ್ಟ್ 29 ಮತ್ತು 30 ಹಾಗೂ ಸೆಪ್ಟೆಂಬರ್ 19 ಮತ್ತು 20ರಂದು ವಿಶೇಷ ಅಭಿಯಾನ ನಡೆಯಲಿದ್ದು, ಎಲ್ಲ ಮತಗಟ್ಟೆಗಳಲ್ಲಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಹಾಜರಿದ್ದು ವಿವಿಧ ಅರ್ಜಿಗಳನ್ನು ಸ್ವೀಕರಿಸಲಿದ್ದಾರೆ.

**ಹೊಸ ಮತದಾರರಿಗೆ ನಮೂನೆ6:** ಅಕ್ಟೋಬರ್ 1, 2026ಕ್ಕೆ 18 ವರ್ಷ ಪೂರ್ಣಗೊಳ್ಳುವ ಯುವಜನರು ಹಾಗೂ ಇದುವರೆಗೆ ಯಾವುದೇ ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದವರು ನಮೂನೆ6ರಲ್ಲಿ ಅರ್ಜಿ ಸಲ್ಲಿಸಬಹುದು. ವಯಸ್ಸು ಮತ್ತು ವಿಳಾಸ ದೃಢೀಕರಣ ದಾಖಲೆ, ಇತ್ತೀಚಿನ ಭಾವಚಿತ್ರ ಹಾಗೂ ಅಗತ್ಯ ಘೋಷಣಾ ಪತ್ರವನ್ನು ಸಲ್ಲಿಸಬೇಕು.

**ಹೆಸರು ಕೈಬಿಡಲು ನಮೂನೆ7:** ಮರಣ ಹೊಂದಿದವರು, ಶಾಶ್ವತವಾಗಿ ಸ್ಥಳಾಂತರಗೊಂಡವರು ಅಥವಾ ನಕಲಿ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ನಮೂನೆ7ರಲ್ಲಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

**ತಿದ್ದುಪಡಿಗೆ ನಮೂನೆ8:** ವಸತಿ ಬದಲಾವಣೆ, ಕ್ಷೇತ್ರದೊಳಗೆ ಅಥವಾ ಹೊರಗೆ ಸ್ಥಳಾಂತರ, ಹೆಸರು, ಭಾವಚಿತ್ರ, ವಿಳಾಸ ಸೇರಿದಂತೆ ಮತದಾರರ ವಿವರಗಳಲ್ಲಿ ತಿದ್ದುಪಡಿ ಅಗತ್ಯವಿದ್ದರೆ ನಮೂನೆ8ರಲ್ಲಿ ಅರ್ಜಿ ಸಲ್ಲಿಸಬೇಕು. ವಿಕಲಚೇತನರು ತಮ್ಮ ಗುರುತನ್ನು ಮತದಾರರ ಪಟ್ಟಿಯಲ್ಲಿ ದಾಖಲಿಸಲು ಸಹ ಇದೇ ನಮೂನೆಯನ್ನು ಬಳಸಬಹುದಾಗಿದೆ.

ಸಾರ್ವಜನಿಕರು ವಿಶೇಷ ಅಭಿಯಾನದ ದಿನಗಳಲ್ಲಿ ತಮ್ಮ ಮತಗಟ್ಟೆಗೆ ಭೇಟಿ ನೀಡಿ ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಪರಿಶೀಲಿಸಿಕೊಳ್ಳಬೇಕು. ಅಗತ್ಯವಿದ್ದಲ್ಲಿ ಸಂಬಂಧಿಸಿದ ನಮೂನೆಯಲ್ಲಿ ಅರ್ಜಿ ಸಲ್ಲಿಸಿ ಮತದಾನದ ಹಕ್ಕನ್ನು ಖಚಿತಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ಸಾಲ ಪಡೆದ ರೈತರಿಗೆ ವಿಮೆ ನೋಂದಣಿಗೆ ಆ.31ರವರೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಮುಂಗಾರು ಹಂಗಾಮಿಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಅಧಿಸೂಚಿತ ಬೆಳೆಗಳಿಗೆ ಬೆಳೆ ವಿಮೆ ನೋಂದಣಿ ಪ್ರಕ್ರಿಯೆ ನಡೆಯುತ್ತಿದ್ದು, ಸಾಮಾನ್ಯವಾಗಿ ಎಲ್ಲ ಬೆಳೆಗಳ ನೋಂದಣಿ ಅವಧಿ ಆ.14ಕ್ಕೆ ಮುಕ್ತಾಯಗೊಂಡಿದೆ.

ಆದರೆ, ಬೆಳೆ ಸಾಲ ಪಡೆದ ರೈತರಿಗೆ ಸೂರ್ಯಕಾಂತಿ (ಮಳೆಯಾಶ್ರಿತ ಮತ್ತು ನೀರಾವರಿ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ) ಹಾಗೂ ಈರುಳ್ಳಿ (ಮಳೆಯಾಶ್ರಿತ) ಬೆಳೆಗಳಿಗೆ ಆ.31ರವರೆಗೆ ಬೆಳೆ ವಿಮೆ ನೋಂದಾಯಿಸಲು ಕೇಂದ್ರ ಸರ್ಕಾರ ವಿಶೇಷ ಅವಕಾಶ ಕಲ್ಪಿಸಿದೆ. ಅರ್ಹ ಬೆಳೆ ಸಾಲ ಪಡೆದ ರೈತರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ನಿಗದಿತ ಅವಧಿಯೊಳಗೆ ಬೆಳೆ ವಿಮೆಗೆ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಜಿಲ್ಲೆಯಲ್ಲಿ ಶೇ.34 ಮಳೆ ಕೊರತೆ | ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಖಡಕ್ ಸೂಚನೆ

# ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ತಲೆದೋರಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸುವಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪ್ರಥಮ ಆದ್ಯತೆ ನೀಡಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲೆಯ ಮಳೆ ಪ್ರಮಾಣ, ಬರ ಪರಿಸ್ಥಿತಿ, ಬೆಳೆ ಸ್ಥಿತಿ, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಸಮಗ್ರ ಮಾಹಿತಿ ಪಡೆದು ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಮಳೆ ಕೊರತೆ ಕಂಡುಬಂದಿದ್ದು, ವಿಶೇಷವಾಗಿ ಗಜೇಂದ್ರಗಡ ತಾಲೂಕಿನಲ್ಲಿ ವಾಡಿಕೆಗಿಂತ ಶೇ.45ರಷ್ಟು ಮಳೆ ಕೊರತೆಯಾಗಿರುವ ಹಿನ್ನೆಲೆಯಲ್ಲಿ ತಾಲೂಕನ್ನು ಬರಪೀಡಿತ ಎಂದು ಘೋಷಿಸಲಾಗಿದೆ ಎಂದು ತಿಳಿಸಲಾಯಿತು. ಈ ಹಿನ್ನೆಲೆಯಲ್ಲಿ ಬರ ನಿರ್ವಹಣಾ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಡಾ. ವೆಂಕಟೇಶ ಸೂಚಿಸಿದರು.

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ನಿರಂತರ ನಿಗಾ ವಹಿಸಬೇಕು. ಯಾವುದೇ ಪ್ರದೇಶದಲ್ಲಿ ನೀರಿನ ಸಮಸ್ಯೆ ಕಂಡುಬಂದ ತಕ್ಷಣ ಪರ್ಯಾಯ ವ್ಯವಸ್ಥೆ ಮೂಲಕ ಸಮರ್ಪಕ ನೀರು ಪೂರೈಕೆ ಮಾಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಜಿಲ್ಲೆಯಲ್ಲಿ ಜಾನುವಾರುಗಳಿಗೆ ಸುಮಾರು 37 ವಾರಗಳಿಗೆ ಸಾಕಾಗುವಷ್ಟು ಮೇವಿನ ಲಭ್ಯತೆ ಇರುವ ಕುರಿತು ಮಾಹಿತಿ ಪಡೆದ ಅವರು, ಮುಂದಿನ ದಿನಗಳಲ್ಲಿಯೂ ಮೇವಿನ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಬರ ನಿರ್ವಹಣಾ ಕಾರ್ಯಗಳಿಗೆ ವಿಬಿ ಜಿ ರಾಮ್‌ಜಿ ಉದ್ಯೋಗ ಖಾತ್ರಿ ಯೋಜನೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಂಧಿಸಿದ ಇಲಾಖೆಗಳೊಂದಿಗೆ ಚರ್ಚಿಸಿ ಅಗತ್ಯ ಕಾಮಗಾರಿಗಳನ್ನು ಗುರುತಿಸಿ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬಗ್ಗೆಯೂ ಪರಿಶೀಲನೆ ನಡೆಸಲಾಯಿತು. ಶಕ್ತಿ ಯೋಜನೆಯಡಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಸಾರಿಗೆ ವ್ಯವಸ್ಥೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಹೇಳಿದರು.

ಅಂಗನವಾಡಿ ಕಟ್ಟಡಗಳ ಸ್ಥಿತಿಗತಿ ಕುರಿತು ಮಾಹಿತಿ ಪಡೆದ ಡಾ. ವೆಂಕಟೇಶ, ಅಗತ್ಯವಿರುವ ಕಟ್ಟಡಗಳನ್ನು ಹೊಸ ಉದ್ಯೋಗ ಖಾತ್ರಿ ಯೋಜನೆಯಡಿ ಅಭಿವೃದ್ಧಿಪಡಿಸುವ ಕುರಿತು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಶಾಲೆಗಳು ಹಾಗೂ ವಿವಿಧ ವಸತಿ ನಿಲಯಗಳ

> **ಬರ ನಿರ್ವಹಣೆಯಲ್ಲಿ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಾರದು. ಪ್ರತಿಯೊಂದು ಪ್ರದೇಶದ ಪರಿಸ್ಥಿತಿಯನ್ನು ಅಧಿಕಾರಿಗಳು ನಿರಂತರವಾಗಿ ಗಮನಿಸಿ, ಸಮಸ್ಯೆ ಕಂಡುಬಂದ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು.**
>
> **- ಡಾ. ಎಂ.ವಿ. ವೆಂಕಟೇಶ,**
> ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ

ಸ್ಥಿತಿಗತಿಗಳನ್ನು ಪರಿಶೀಲಿಸಿದ ಅವರು, ಮಕ್ಕಳಿಗೆ ಗುಣಮಟ್ಟದ ಆಹಾರ ಮತ್ತು ಉತ್ತಮ ಶಿಕ್ಷಣ ದೊರೆಯುವಂತೆ ಸಂಬಂಧಿಸಿದ ಅಧಿಕಾರಿಗಳು ಖಾತರಿಪಡಿಸಬೇಕು ಎಂದರು.

ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ ಪರಿಹಾರ ಒದಗಿಸುವ ಉದ್ದೇಶದಿಂದ ಜನಸ್ಪಂದನ ಕಾರ್ಯಕ್ರಮಗಳನ್ನು ದೊಡ್ಡ ಮಟ್ಟದಲ್ಲಿ ಆಯೋಜಿಸಬೇಕು ಎಂದು ಅವರು ಸೂಚಿಸಿದರು. ಸ್ಥಳೀಯ ಜನಪ್ರತಿನಿಧಿಗಳನ್ನು ಕಾರ್ಯಕ್ರಮಗಳಿಗೆ ಆಹ್ವಾನಿಸಿ ಸಾರ್ವಜನಿಕರ ಅಹವಾಲುಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸಬೇಕು ಎಂದರು.

ಸರ್ಕಾರದ ಪ್ರಜಾಸೇವೆ' ನೂತನ ಮಾರ್ಗಸೂಚಿಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಎಲ್ಲ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಜೂನ್ 1ರಿಂದ ಆಗಸ್ಟ್ 28ರವರೆಗೆ ಗದಗ ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ.34ರಷ್ಟು ಮಳೆ ಕೊರತೆ ದಾಖಲಾಗಿದೆ. ಈ ಅವಧಿಯಲ್ಲಿ ವಾಡಿಕೆಯಂತೆ 229.3 ಮಿ.ಮೀ. ಮಳೆಯಾಗಬೇಕಾಗಿದ್ದರೆ, ಕೇವಲ 152.2 ಮಿ.ಮೀ. ಮಳೆ ದಾಖಲಾಗಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ತಾಲೂಕುವಾರು ಗಮನಿಸಿದರೆ ಗದಗ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿ ತಲಾ ಶೇ.46ರಷ್ಟು ಮಳೆ ಕೊರತೆ ದಾಖಲಾಗಿದೆ. ರೋಣ ಮತ್ತು ಮುಂಡರಗಿಯಲ್ಲಿ ತಲಾ ಶೇ.39, ಶಿರಹಟ್ಟಿಯಲ್ಲಿ ಶೇ.31 ಹಾಗೂ ಲಕ್ಷ್ಮೇಶ್ವರದಲ್ಲಿ ಶೇ.20ರಷ್ಟು ಮಳೆ ಕೊರತೆಯಾಗಿದೆ. ನರಗುಂದ ತಾಲೂಕಿನಲ್ಲಿ ಮಾತ್ರ ಶೇ.10ರಷ್ಟು ಅಧಿಕ ಮಳೆ ದಾಖಲಾಗಿದೆ.

ಆಗಸ್ಟ್ 1ರಿಂದ 28ರವರೆಗಿನ ಅವಧಿಯಲ್ಲಿಯೂ ಜಿಲ್ಲೆಯಲ್ಲಿ ವಾಡಿಕೆಯ 73.1 ಮಿ.ಮೀ. ಮಳೆಗೆ ಕೇವಲ 44.6 ಮಿ.ಮೀ. ಮಳೆ ದಾಖಲಾಗಿದ್ದು, ಶೇ.39ರಷ್ಟು ಕೊರತೆ ಕಂಡುಬಂದಿದೆ.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ನೀಡಿರುವ ಎಲ್ಲ ನಿರ್ದೇಶನಗಳನ್ನು ಅಧಿಕಾರಿಗಳು ಚಾಚೂ ತಪ್ಪದೆ ಪಾಲಿಸಬೇಕು ಎಂದು ಸೂಚಿಸಿದರು. ಜಿಲ್ಲೆಯ ಅಭಿವೃದ್ಧಿ ಹಾಗೂ ಸಾರ್ವಜನಿಕ ಸೇವೆಗೆ ಸಂಬಂಧಿಸಿದ ಕಾರ್ಯಗಳಲ್ಲಿ ಉತ್ತಮ ಪ್ರಗತಿ ಸಾಧಿಸುವಂತೆ ಹಾಗೂ ವಿಶೇಷವಾಗಿ ಕಂದಾಯ ಇಲಾಖೆಯ ಬಾಕಿ ಕಾರ್ಯಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಡಿಎಸ್ ಸಿ ಆರ್. ಮುಂಡರಗಿ, ಕೃಷಿ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಿದ್ದರು.

## ನೀಟ್-ಪಿಜಿ ಪರೀಕ್ಷೆ ಹಿನ್ನೆಲೆ: ಇಂದು ಪ್ರತಿಬಂಧಕಾಜ್ಞೆ ಜಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ವೈದ್ಯಕೀಯ ವಿಜ್ಞಾನಗಳ ಪರೀಕ್ಷಾ ಮಂಡಳಿ ವತಿಯಿಂದ ಆ.30ರಂದು ನಡೆಯಲಿರುವ ನೀಟ್-ಪಿಜಿ ಪರೀಕ್ಷೆಯನ್ನು ಸುಗಮ ಹಾಗೂ ಪಾರದರ್ಶಕವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಸುತ್ತಮುತ್ತ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಲಕ್ಷ್ಮೇಶ್ವರದ ಸವಣೂರು ರಸ್ತೆಯಲ್ಲಿರುವ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಮಹಾವಿದ್ಯಾಲಯದಲ್ಲಿ ಪರೀಕ್ಷಾ ಕೇಂದ್ರ ಸ್ಥಾಪಿಸಲಾಗಿದ್ದು, ಬೆಳಿಗ್ಗೆ 9ರಿಂದ ಮಧ್ಯಾಹ್ನ 12.30ರವರೆಗೆ ಪರೀಕ್ಷೆ ನಡೆಯಲಿದೆ.

ಪರೀಕ್ಷೆಯಲ್ಲಿ ನಕಲು, ನಕಲಿ ಅಭ್ಯರ್ಥಿಗಳ ಹಾಜರಾತಿ ಸೇರಿದಂತೆ ಯಾವುದೇ ಅಕ್ರಮಗಳಿಗೆ ಅವಕಾಶವಾಗದಂತೆ ಹಾಗೂ ಶಾಂತಿ-ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ2023ರ ಕಲಂ 163ರಡಿ ಪ್ರತಿಬಂಧಕಾಜ್ಞೆ ವಿಧಿಸಲಾಗಿದೆ. ಈ ವ್ಯಾಪ್ತಿಯಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಅನಗತ್ಯವಾಗಿ ಗುಂಪುಗೂಡುವುದನ್ನು ನಿಷೇಧಿಸಲಾಗಿದೆ. ಅಲ್ಲದೆ, ಜೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್ ಹಾಗೂ ಫೋಟೋಕಾಪಿ ಕೇಂದ್ರಗಳನ್ನು ಪರೀಕ್ಷಾ ಅವಧಿಯಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಸೂಚಿಸಲಾಗಿದೆ.

ಪರೀಕ್ಷೆಯ ಗೌಪ್ಯತೆ ಹಾಗೂ ಶಾಂತಿ-ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಈ ಪ್ರತಿಬಂಧಕಾಜ್ಞೆಯು ಆ.30ರಂದು ಬೆಳಿಗ್ಗೆ 6ರಿಂದ ಮಧ್ಯಾಹ್ನ 2.30ರವರೆಗೆ ಜಾರಿಯಲ್ಲಿರಲಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಂಡುರಂಗನ ಸನ್ನಿಧಿಯಲ್ಲಿ ಐದು ದಿನಗಳ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಜನೆಯ ನಾದ, ಕೀರ್ತನೆಯ ರಾಗ, ನಿರಂತರ ನಾಮಸ್ಮರಣೆ ಮತ್ತು ನೂರಾರು ಭಕ್ತರ ಭಕ್ತಿಭಾವದ ನಡುವೆ ಪಟ್ಟಣದ ಶ್ರೀ ಪಾಂಡುರಂಗ ದೇವಸ್ಥಾನ ಐದು ದಿನಗಳ ಕಾಲ ಆಧ್ಯಾತ್ಮಿಕ ಲೋಕವಾಗಿ ಪರಿವರ್ತನೆಗೊಂಡಿತ್ತು. ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಶ್ರೀ ಜ್ಞಾನೇಶ್ವರಿ ಪಾರಾಯಣದ ರಜತ ಮಹೋತ್ಸವ ಹಾಗೂ ಶ್ರೀ ಪಾಂಡುರಂಗರುಕ್ಮಾಯಿ ನೂತನ ಮೂರ್ತಿಗಳ ಪ್ರತಿಷ್ಠಾಪನಾ ಮಹೋತ್ಸವ ಶನಿವಾರ ಅದ್ದೂರಿ ಹಾಗೂ ಭಕ್ತಿಭಾವದಿಂದ ಸಂಪನ್ನಗೊಂಡಿತು.

ಆ. 25ರಿಂದ 29ರವರೆಗೆ ನಡೆದ ಮಹೋತ್ಸವದಲ್ಲಿ ಪ್ರತಿದಿನ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿ ಭಕ್ತರನ್ನು ಆಕರ್ಷಿಸಿದವು. ಕಾಕಡಾ ಆರತಿ, ಶ್ರೀ ಜ್ಞಾನೇಶ್ವರಿ ಪಾರಾಯಣ, ಮಂಚರಿಗಾಥಾ ಭಜನೆ, ಪ್ರವಚನ, ನಾಮಜಪ, ಕೀರ್ತನೆ, ಜಾಗರ ಭಜನೆ ಹಾಗೂ ಭಾರೂಡ ಕಾರ್ಯಕ್ರಮಗಳು ದೇವಸ್ಥಾನದ ಆವರಣದಲ್ಲಿ ಭಕ್ತಿಯ ವಾತಾವರಣವನ್ನು ನಿರ್ಮಿಸಿದವು.

ನೂರಾರು ಭಕ್ತರು ಐದು ದಿನಗಳ ಕಾಲ ನಡೆದ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಪಾಂಡುರಂಗನ ಕೃಪೆಗೆ ಪಾತ್ರರಾದರು. ಪ್ರತಿದಿನ ಆಗಮಿಸಿದ ಭಕ್ತರಿಗೆ ಉಪಹಾರ ಹಾಗೂ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

ಶನಿವಾರ ನಡೆದ ಸಮಾರೋಪ ಕಾರ್ಯಕ್ರಮದಲ್ಲಿ ದೇವಸ್ಥಾನದಲ್ಲಿ ಕಾಕಡಾ ಆರತಿ, ಜ್ಞಾನೇಶ್ವರಿ ಪಾರಾಯಣ ಹಾಗೂ ಮಂಚರಿಗಾಥಾ ಭಜನೆ ಜರುಗಿತು. ಬಳಿಕ ಹ.ಭ.ಪ. ಸುನೀಲ ಬಾಬರ ಗುರೂಜಿ ಅವರಿಂದ ಕಾಲಾ ಕೀರ್ತನೆ ನಡೆಯಿತು. ಧರ್ಮಸಭೆಯೊಂದಿಗೆ ಐದು ದಿನಗಳ ಧಾರ್ಮಿಕ ಮಹೋತ್ಸವಕ್ಕೆ ತೆರೆ ಬಿದ್ದಿತು.

**ಭಜನೆನಾಮಸ್ಮರಣೆ ಬದುಕಿಗೆ ಸಾತ್ವಿಕ ದಾರಿ**

ಸಮಾರೋಪ ಸಮಾರಂಭದಲ್ಲಿ ಕೊಲ್ಲಾಪುರದ ವಾರಕರಿ ರತ್ನ' ಹ.ಭ.ಪ. ತುಕಾರಾಮ ಪವಾರ ಶ್ರೀಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಜಮಖಂಡಿಯ ಹ.ಭ.ಪ. ಸುನೀಲ ಬಾಬರ ಗುರೂಜಿ ಮಾತನಾಡಿ, ಜ್ಞಾನೇಶ್ವರಿ ಪಾರಾಯಣದಂತಹ ಕಾರ್ಯಕ್ರಮಗಳು ಜ್ಞಾನ, ಸದಾಚಾರ ಹಾಗೂ ಸಾತ್ವಿಕ ಜೀವನದ ಸಂದೇಶವನ್ನು ಜನರಿಗೆ ತಲುಪಿಸುತ್ತವೆ. ಇಂತಹ ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಚರಣೆಗಳು ಮಕ್ಕಳಿಗೆ ಹಾಗೂ ಯುವಪೀಳಿಗೆಗೆ ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಪರಿಚಯಿಸುವ ಸೇತುವೆಯಾಗಬೇಕು ಎಂದು ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಇಂತಹ ಕಾರ್ಯಕ್ರಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಮಾಜದಲ್ಲಿ ಶಾಂತಿ, ಸೌಹಾರ್ದ ಮತ್ತು ಒಗ್ಗಟ್ಟು ಬೆಳೆಸಲು ಧಾರ್ಮಿಕ ಆಚರಣೆಗಳು ಸಹಕಾರಿಯಾಗುತ್ತವೆ ಎಂದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಭಜನೆ ಮತ್ತು ಕೀರ್ತನೆಗಳು ಕೇವಲ ಧಾರ್ಮಿಕ ಆಚರಣೆಗಳಾಗಿರದೆ ಸಮಾಜವನ್ನು ಒಗ್ಗೂಡಿಸುವ ಶಕ್ತಿಯಾಗಿವೆ. ಇಂದಿನ ಒತ್ತಡದ ಬದುಕಿನಲ್ಲಿ ಮಾನಸಿಕ ನೆಮ್ಮದಿ ನೀಡುವ ಮಾಧ್ಯಮಗಳಾಗಿಯೂ ಅವು ಕಾರ್ಯನಿರ್ವಹಿಸುತ್ತವೆ ಎಂದು ಹೇಳಿದರು.




> ಭಜನೆ, ಕೀರ್ತನೆ ಹಾಗೂ ನಾಮಸ್ಮರಣೆ ಕೇವಲ ಧಾರ್ಮಿಕ ಆಚರಣೆಗಳಲ್ಲ. ಅವು ಮನಸ್ಸಿಗೆ ನೆಮ್ಮದಿ ನೀಡಿ, ಉತ್ತಮ ಚಿಂತನೆ ಮತ್ತು ಸಾತ್ವಿಕ ಬದುಕಿಗೆ ದಾರಿ ತೋರಿಸುತ್ತವೆ. ಸಾಮೂಹಿಕ ನಾಮಸ್ಮರಣೆಯಿಂದ ಭಕ್ತಿ, ಏಕತೆ ಮತ್ತು ಸಹೋದರತ್ವದ ಭಾವನೆ ಮತ್ತಷ್ಟು ಗಟ್ಟಿಯಾಗುತ್ತದೆ.
> **-ಹ.ಭ.ಪ. ತುಕಾರಾಮ ಪವಾರ ಶ್ರೀಗಳು**

ಈ ಸಂದರ್ಭದಲ್ಲಿ ಮಾಜಿ ಶಾಸಕ ಸುನೀಲ ಮಹಾಂತಶೆಟ್ಟರ, ಮಹೇಶ ಲಮಾಣಿ, ಪುಂಡಲೀಕ ಮಾತಾಡೆ, ಪಾಂಡುರಂಗ ಟೀಕಾರೆ, ಗಂಗಾಧರ ಮೆಣಸಿನಕಾಯಿ, ದಿಗಂಬರ ಪೂಜಾರ, ಮಹೇಶ ಹೊಗೆಸೊಪ್ಪಿನ, ಸರೋಜಮ್ಮ ನವಲೆ, ಕಿರಣ ನವಲೆ, ನಾಗೇಶ ಮಾಳದಕರ, ಪುಷ್ಪಾ ಬದಿ ಸೇರಿದಂತೆ ದೇವಸ್ಥಾನದ ಆಡಳಿತ ಮಂಡಳಿ, ಭಜನಾ ಮಂಡಳಿಗಳ ಸದಸ್ಯರು, ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು. ವಾಸು ಬೋಮಲೆ ಹಾಗೂ ಪ್ರಭು ಬೋಮಲೆ ಕಾರ್ಯಕ್ರಮ ನಿರೂಪಿಸಿದರು.

## ಇಂದು ಬನ್ನಿಕೊಪ್ಪದಲ್ಲಿ ಉಚಿತ ಆರೋಗ್ಯ ಶಿಬಿರ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬನ್ನಿಕೊಪ್ಪ ಗ್ರಾಮದಲ್ಲಿ ಡಾ. ಎಸ್.ಎಫ್. ಹಿರೇಮಠ ಅವರ ಸ್ಮರಣಾರ್ಥ ಡಾ. ಎಸ್.ಎಫ್. ಹಿರೇಮಠ ಟ್ರಸ್ಟ್ ಹಾಗೂ ವಿವಿಧ ಸಂಘ-ಸಂಸ್ಥೆಗಳ ವತಿಯಿಂದ ಅಕ್ಟೋಬರ್ 30ರಂದು ಉಚಿತ ಆರೋಗ್ಯ ತಪಾಸಣಾ ಮತ್ತು ರಕ್ತದಾನ ಶಿಬಿರ ಆಯೋಜಿಸಲಾಗಿದೆ. ಬನ್ನಿಕೊಪ್ಪದ ಕನ್ನಡ ಗಂಡು ಮಕ್ಕಳ ಶಾಲಾ ಆವರಣದಲ್ಲಿ ನಡೆಯಲಿರುವ ಶಿಬಿರವನ್ನು ಶ್ರೀ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ, ಜಯಪ್ರಿಯ ಕಣ್ಣಿನ ಆಸ್ಪತ್ರೆ, ಹುಬ್ಬಳ್ಳಿ ಹಾಗೂ ರಕ್ತ ಭಂಡಾರ ಕೇಂದ್ರ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದೆ. ಶಿಬಿರದಲ್ಲಿ ನುರಿತ ವೈದ್ಯರಿಂದ ನೇತ್ರ ತಪಾಸಣೆ, ಬಿಪಿ, ಹೃದಯ ಸಂಬಂಧಿತ ಕಾಯಿಲೆಗಳು, ಇಸಿಜಿ, ಮಧುಮೇಹ, ರಕ್ತ ಸಂಬಂಧಿತ ಸಮಸ್ಯೆಗಳು, ಚರ್ಮರೋಗ, ಕೀಲು ಮತ್ತು ಮೂಳೆ ಸಮಸ್ಯೆಗಳು, ಶ್ವಾಸರೋಗ, ವಿವಿಧ ತಲೆನೋವು ಸೇರಿದಂತೆ ಹಲವು ಕಾಯಿಲೆಗಳಿಗೆ ತಪಾಸಣೆ ಹಾಗೂ ಸೂಕ್ತ ಚಿಕಿತ್ಸೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ತವನರಾಜ್ 7760956910, ಶಿವಪ್ರಸಾದ 7204862205, ಶಿವು ಗೌಡನಾಯ್ಕರ್ 7026724143, ಆನಂದ ಪುರದ 9148825271 ಹಾಗೂ ಜಗದೀಶ 8722865712 ಸಂಪರ್ಕಿಸಬಹುದು.

## ಕೃಷಿ ಹೊಂಡ ಹೊಂದಿರುವ ರೈತರಿಂದ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮೀನುಗಾರಿಕೆ ಇಲಾಖೆಯಿಂದ 2026-27ನೇ ಸಾಲಿನ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಸಹಾಯ ಯೋಜನೆಯಡಿ ಕೃಷಿ ಹೊಂಡ ಹಾಗೂ ಬಾವಿಗಳನ್ನು ಹೊಂದಿರುವ ಕೃಷಿಕರಿಗೆ ಉಚಿತವಾಗಿ 500 ಬಿತ್ತನೆ ಮೀನುಮರಿಗಳನ್ನು ವಿತರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ರೈತರು ಸೆಪ್ಟೆಂಬರ್ 11ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಗದಗ ಅವರನ್ನು ಮೊಬೈಲ್ ಸಂಖ್ಯೆ 8073649362 ಅಥವಾ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮುಂಡರಗಿ ಅವರನ್ನು ಮೊಬೈಲ್ ಸಂಖ್ಯೆ 8095792530ಕ್ಕೆ ಸಂಪರ್ಕಿಸಬಹುದು ಎಂದು ಗದಗ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್ಲ ತಾಲೂಕು ಬರ ಎಂದು ಘೋಷಿಸಿ; ಇಲ್ಲವೇ ಹೋರಾಟ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಬರಗಾಲ ಪರಿಸ್ಥಿತಿ ಕುರಿತು ಸರ್ಕಾರಕ್ಕೆ ಅಸಮರ್ಪಕ ವರದಿ ಸಲ್ಲಿಸಲಾಗಿದೆ ಎಂಬ ಗಂಭೀರ ಆರೋಪವನ್ನು ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಮಾಡಿದ್ದಾರೆ.



ಗದಗ ಜಿಲ್ಲೆಯ ಗದಗ, ಮುಂಡರಗಿ, ಶಿರಹಟ್ಟಿ, ರೋಣ, ನರಗುಂದ ಹಾಗೂ ಲಕ್ಷ್ಮೇಶ್ವರ ಸೇರಿದಂತೆ ವಿವಿಧ ತಾಲೂಕುಗಳಲ್ಲಿ ತೀವ್ರ ಮಳೆ ಕೊರತೆಯಿಂದ ರೈತರು ಬೆಳೆ ನಷ್ಟ ಅನುಭವಿಸಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದರೆ ಸರ್ಕಾರ ಕೇವಲ ಒಂದು ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಿರುವುದು ರೈತರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳು ಹಾಗೂ ಕೃಷಿ, ತೋಟಗಾರಿಕೆ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಸರ್ಕಾರಕ್ಕೆ ವಾಸ್ತವ ಪರಿಸ್ಥಿತಿಗೆ ವಿರುದ್ಧವಾದ ಅಥವಾ ಅಸಮರ್ಪಕ ವರದಿ ನೀಡಿರುವ ಸಂಶಯ ವ್ಯಕ್ತವಾಗುತ್ತಿದೆ ಎಂದು ಬಾಬರಿ ಆರೋಪಿಸಿದರು.

ಪಕ್ಕದ ಬಾಗಲಕೋಟೆ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವ ಸರ್ಕಾರ, ಗದಗ ಜಿಲ್ಲೆಯ ರೈತರ ಸಂಕಷ್ಟವನ್ನು ಕಡೆಗಣಿಸಿರುವುದು ಸರಿಯಲ್ಲ. ಅಧಿಕಾರಿಗಳು ಖುದ್ದಾಗಿ ಹೊಲಗಳಿಗೆ ಭೇಟಿ ನೀಡಿ ಸಮರ್ಪಕ ಸಮೀಕ್ಷೆ ನಡೆಸಿದ್ದಾರೆಯೇ ಅಥವಾ ಕಚೇರಿಯಲ್ಲಿಯೇ ಕುಳಿತು ವರದಿ ಸಿದ್ಧಪಡಿಸಿದ್ದಾರೆಯೇ ಎಂಬ ಪ್ರಶ್ನೆ ಮೂಡುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ಮುಖ್ಯಮಂತ್ರಿ ಹಾಗೂ ಕೃಷಿ ಸಚಿವರು ಮಧ್ಯಪ್ರವೇಶಿಸಿ, ಗದಗ ಜಿಲ್ಲೆಯ ಬರ ಪರಿಸ್ಥಿತಿಯ ಕುರಿತು ಮರುಪರಿಶೀಲನೆ ನಡೆಸಬೇಕು.

ತಪ್ಪ ಅಥವಾ ಅಸಮರ್ಪಕ ವರದಿ ಇದ್ದರೆ ಅದನ್ನು ತಿರಸ್ಕರಿಸಿ, ಸೋಮವಾರದೊಳಗೆ ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಸಂಪೂರ್ಣ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ಅವರು ಆಗ್ರಹಿಸಿದರು.

ಇಲ್ಲವಾದರೆ ಮಂಗಳವಾರ ಗದಗ ಜಿಲ್ಲಾ ಬಂದ್ ನಡೆಸುವುದರೊಂದಿಗೆ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಯಲ್ಲಪ್ಪ ಬಾಬರಿ ಎಚ್ಚರಿಕೆ ನೀಡಿದರು.

ಉತ್ತರ ಕರ್ನಾಟಕವನ್ನು ನಿರಂತರವಾಗಿ ಕಡೆಗಣಿಸುವ ಧೋರಣೆ ಮುಂದುವರಿದರೆ, ಮುಂದಿನ ದಿನಗಳಲ್ಲಿ ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟದ ಕಿಚ್ಚನ್ನು ರೈತ ಸಂಘಟನೆಗಳು ಹಚ್ಚಬೇಕಾದ ಪರಿಸ್ಥಿತಿ ಎದುರಾಗಲಿದೆ ಎಂದು ಅವರು ಎಚ್ಚರಿಸಿದ್ದಾರೆ.

### ಸರ್ಕಾರಿ ಶಾಲೆ ಮಕ್ಕಳಿಗೆ ಸಿಹಿ ಭೋಜನ, ಕಲಿಕಾ ಸಾಮಗ್ರಿ ವಿತರಣೆ

# ಸರಕಾರಿ ಶಾಲೆಯಲ್ಲಿ ಅಮೃತಭೋಜನ-ಜ್ಞಾನಸಿಂಚನ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣದೊಂದಿಗೆ ಮಕ್ಕಳಲ್ಲಿ ಮಾನವೀಯ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿ ಕದಳಿಶ್ರೀ ಮಹಿಳಾ ವೇದಿಕೆಯ ವತಿಯಿಂದ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 3ರಲ್ಲಿ ಶ್ರಾವಣ ಮಾಸದ ಅಂಗವಾಗಿ ಅಮೃತಭೋಜನ-ಜ್ಞಾನಸಿಂಚನ' ಕಾರ್ಯಕ್ರಮ ಆಯೋಜಿಸಲಾಯಿತು.

ಪ್ರತಿವರ್ಷ ಸರ್ಕಾರಿ ಶಾಲೆಗಳಲ್ಲಿ ಹಮ್ಮಿಕೊಳ್ಳಲಾಗುವ ಈ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ಭೋಜನದೊಂದಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿ, ಶಿಕ್ಷಣದ ಮಹತ್ವ ಹಾಗೂ ಉತ್ತಮ ಜೀವನ ರೂಪಿಸಿಕೊಳ್ಳುವ ಕುರಿತು ಮಾರ್ಗದರ್ಶನ ನೀಡಲಾಯಿತು.

ಪ್ರಕಾಶಕ ವಿಜಯಕುಮಾರ ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಬಗ್ಗೆ ಉತ್ತಮ ಹಾಗೂ ಉನ್ನತ ಗುರಿಯನ್ನು ಹೊಂದಬೇಕು. ಸಣ್ಣ ಗುರಿಗಳಿಗೆ ಸೀಮಿತವಾಗದೆ ದೊಡ್ಡ ಕನಸುಗಳನ್ನು ಕಾಣಬೇಕು. ದೃಢ ಸಂಕಲ್ಪ ಮತ್ತು ನಿರಂತರ ಪ್ರಯತ್ನವಿದ್ದರೆ ಸಾಧನೆಗೆ ಅಸಾಧ್ಯವಾದುದು ಯಾವುದೂ ಇಲ್ಲ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಚಿಂತಕಿ ಮೀನಾಕ್ಷಿ ಕೊರವನವರ ಮಾತನಾಡಿ, ಮಕ್ಕಳು ಭವಿಷ್ಯದ ಯುವ ನಾಗರಿಕರಾಗಿದ್ದು, ಅವರಲ್ಲಿ ಶಿಕ್ಷಣದ ಜತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಅಗತ್ಯವಾಗಿದೆ. ಜ್ಞಾನವು ಮಾನವೀಯತೆಯನ್ನು ಪ್ರತಿಬಿಂಬಿಸುವಂತಿರಬೇಕು. ಸಚ್ಚಾರಿತ್ರ್ಯವನ್ನು ಬೆಳೆಸಿಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆ ಮಕ್ಕಳು ಸಿದ್ಧರಾಗಬೇಕು ಎಂದರು.

ಅತಿಥಿಗಳಾದ ಚೈತ್ರಾ ತೋಟದ ಹಾಗೂ ರೇಖಾ ತೋಟದ ಮಾತನಾಡಿ, ಸಂಸ್ಕಾರಯುತ ಜೀವನ ಮನುಷ್ಯನಿಗೆ ಸನ್ಮಾರ್ಗವನ್ನು ತೋರಿಸುತ್ತದೆ. ಮಕ್ಕಳು ಬಾಲ್ಯದಲ್ಲಿಯೇ ದುಶ್ಚಟಗಳಿಂದ ದೂರವಿದ್ದು, ತಂದೆ-ತಾಯಿ ಹಾಗೂ ಗುರುಹಿರಿಯರನ್ನು ಗೌರವಿಸಬೇಕು. ಅವರ ಮಾರ್ಗದರ್ಶನದಲ್ಲಿ ಮುನ್ನಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿ, ಕದಳಿಶ್ರೀ ಮಹಿಳಾ ವೇದಿಕೆಯು ಶಾಲಾ ಮಕ್ಕಳಿಗಾಗಿ ನಿರಂತರವಾಗಿ ವಿಭಿನ್ನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಅವರಲ್ಲಿ ಮೌಲ್ಯಗಳನ್ನು ಬಿತ್ತುವ ಕಾರ್ಯ ಮಾಡುತ್ತಿದೆ. ಹಿರಿಯರು ಶಾಲೆಗೆ ಆಗಮಿಸಿ ಮಕ್ಕಳಿಗೆ ಉತ್ತಮ ಬುದ್ಧಿಮಾತು ಹೇಳುವುದರ ಜತೆಗೆ ಸಿಹಿ ಭೋಜನ ಹಾಗೂ ಕಲಿಕಾ ಸಾಮಗ್ರಿ ವಿತರಿಸುವ ಮೂಲಕ ಕಲಿಕೆಗೆ ಪ್ರೇರಣೆ ನೀಡುತ್ತಿರುವುದು ಸಂತಸದ ಸಂಗತಿ ಎಂದರು.



> ಶಿಕ್ಷಣ ಪಡೆದವರು ಮಾತ್ರ ಸ್ವಾಭಿಮಾನದಿಂದ ಬದುಕಲು ಸಾಧ್ಯ. ವೈಚಾರಿಕತೆಯೊಂದಿಗೆ ಶಿಕ್ಷಣ ಪಡೆದು ಆದರ್ಶ ಜೀವನ ರೂಪಿಸಿಕೊಳ್ಳಬೇಕು. ಯಶಸ್ಸು ಸುಲಭವಾಗಿ ಕೈಗೆಟುಕುವುದಿಲ್ಲ. ಸತತ ಪ್ರಯತ್ನ ಮತ್ತು ಪರಿಶ್ರಮದಿಂದ ಸಿಗುವ ಅಮೂಲ್ಯ ಕೊಡುಗೆಯೇ ಯಶಸ್ಸು. ವಿದ್ಯಾರ್ಥಿಗಳು ಆಲಸ್ಯವನ್ನು ಬಿಟ್ಟು ನಿರಂತರವಾಗಿ ಓದು-ಬರಹದಲ್ಲಿ ತೊಡಗಬೇಕು.
> **-ಸುವರ್ಣ ವಸ್ತ್ರದ**, ಚಿಂತಕಿ

ಕಾರ್ಯಕ್ರಮದ ಆರಂಭದಲ್ಲಿ ಸಂಜನಾ ಪಲ್ಲೇದ, ಅಮೃತಾ ನರಗುಂದ, ಸಮೃದ್ಧಿ ಹಳ್ಳಿಕೇರಿ ಹಾಗೂ ತನ್ವಿ ಹರ್ಲಾಪೂರಮಠ ವಚನ ಪ್ರಾರ್ಥನೆ ಸಲ್ಲಿಸಿದರು. ಮುಖ್ಯೋಪಾಧ್ಯಾಯಿನಿ ಎಸ್.ಎಸ್. ಹಿರೇಮಠ ಸ್ವಾಗತಿಸಿದರು. ಶ್ರೀಮತಿ ಜಿ.ಕೆ. ಕಾಳೆ ನಿರೂಪಿಸಿದರು. ಎಸ್.ಬಿ. ಬಾಗೂರ ವಂದಿಸಿದರು.

ಶ್ರೀದೇವಿ ಹೆಬಸೂರ, ಗಿರಿಜಾ ಪಲ್ಲೇದ, ಲಕ್ಷ್ಮೀ ಹಿರೇಮಠ, ಪೂಜಾ ವಿಭೂತಿಮಠ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಡೆತ್ ಸರ್ಟಿಫಿಕೇಟ್ ಚಿತ್ರಕ್ಕೆ ಮನ್ವಿತ್ ಅತ್ಯುತ್ತಮ ನಟ ಪ್ರಶಸ್ತಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕನ್ನಡ ಚಿತ್ರರಂಗದಲ್ಲಿ ಭರವಸೆಯ ಯುವ ನಾಯಕ ನಟರಾಗಿ ಗುರುತಿಸಿಕೊಳ್ಳುತ್ತಿರುವ ಮನ್ವಿತ್ ಅವರಿಗೆ ಅತ್ಯುತ್ತಮ ನಟ' ಪ್ರಶಸ್ತಿ ಲಭಿಸಿದೆ.

ಉತ್ತರ ಕರ್ನಾಟಕ ಚಲನಚಿತ್ರ, ವಾಣಿಜ್ಯ ಮಂಡಳಿ ವತಿಯಿಂದ ಧಾರವಾಡದ ಆಲೂರ ವೆಂಕಟರಾಯರ ಭವನದಲ್ಲಿ ನಡೆದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ2026ರಲ್ಲಿ, ಮಹಾಂತೇಶ ಹಳ್ಳೂರ ಅವರ ಕಥೆ ಆಧಾರಿತ ಹಾಗೂ ಗುರುದತ್ ಮುಸುರಿ ನಿರ್ದೇಶನದ ಡೆತ್ ಸರ್ಟಿಫಿಕೇಟ್' ಚಿತ್ರದಲ್ಲಿನ ನಾಯಕ ಪಾತ್ರದ ಅಭಿನಯಕ್ಕಾಗಿ ಮನ್ವಿತ್ ಅವರಿಗೆ ಅತ್ಯುತ್ತಮ ನಟ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹಿರಿಯ ನಟ ಹಾಗೂ ಪರಿಸರವಾದಿ, ಜೀವಮಾನ ಸಾಧನೆ ಪುರಸ್ಕೃತ ಸುರೇಶ ಹೆಬ್ಳೀಕರ, ನಿರ್ದೇಶಕ ಹಾಗೂ ನಟ ಅನಿರುದ್ಧ ಜತ್ಕರ್, ಗ್ಯಾರಂಟಿ ನ್ಯೂಸ್‌ನ ರಾಧಾ ಹಿರೇಗೌಡರ ಹಾಗೂ ನ್ಯೂಜೋ ನ್ಯೂಸ್‌ನ ಹರೀಶ ನಾಗರಾಜು ಅವರ ಉಪಸ್ಥಿತಿಯಲ್ಲಿ ಹಿರಿಯ ಚಲನಚಿತ್ರ ನಟಿ ಭವ್ಯ ಹಾಗೂ ಹ್ಯಾಟ್ರಿಕ್ ನಿರ್ದೇಶಕ ನಾಗೇಂದ್ರ ಮಾಗಡಿ ಪ್ರಶಸ್ತಿ ಪತ್ರ ಮತ್ತು ನೆನಪಿನ ಕಾಣಿಕೆ ನೀಡಿ ಮನ್ವಿತ್ ಅವರನ್ನು ಗೌರವಿಸಿದರು.

ವೇದಿಕೆಯಲ್ಲಿ ಉತ್ತರ ಕರ್ನಾಟಕ ಚಲನಚಿತ್ರ, ವಾಣಿಜ್ಯ ಮಂಡಳಿಯ ಅಧ್ಯಕ್ಷ ಮಂಜುನಾಥ ಹಗೇದಾರ, ಕಾರ್ಯಾಧ್ಯಕ್ಷ ಡಾ. ಕಲ್ಮೇಶ ಹಾವೇರಿಪೇಟ, ಪ್ರಧಾನ ಕಾರ್ಯದರ್ಶಿ ರಾಹುಲ್ ದತ್ತಪ್ರಸಾದ, ಉಪಾಧ್ಯಕ್ಷ ಪ್ರಭು ಹಂಚಿನಾಳ, ಸಲಹಾ ಸಮಿತಿ ಸದಸ್ಯ ಹಾಗೂ ಚಲನಚಿತ್ರ ಪತ್ರಕರ್ತ ಡಾ. ಪ್ರಭು ಗಂಜಿಹಾಳ ಸೇರಿದಂತೆ ಮಂಡಳಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಡೆತ್ ಸರ್ಟಿಫಿಕೇಟ್' ಚಿತ್ರದ ಕಥೆಗಾರ ಮಹಾಂತೇಶ ಹಳ್ಳೂರ, ನಿರ್ದೇಶಕ ಗುರುದತ್ ಮುಸುರಿ ಹಾಗೂ ಹಿರಿಯ ಹೋರಾಟಗಾರ ಮತ್ತು ನ್ಯಾಯವಾದಿ ಬಿ.ಡಿ. ಹಿರೇಮಠ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.




ಉತ್ತರ ಕರ್ನಾಟಕದ ಬಾಗಲಕೋಟೆ ಜಿಲ್ಲೆಯಲ್ಲಿ ಚಿತ್ರೀಕರಣಗೊಂಡಿರುವ ಡೆತ್ ಸರ್ಟಿಫಿಕೇಟ್' ಚಿತ್ರದಲ್ಲಿನ ಅಭಿನಯಕ್ಕೆ ಅತ್ಯುತ್ತಮ ನಟ ಪ್ರಶಸ್ತಿ ದೊರೆತಿರುವುದು ಮನ್ವಿತ್ ಅವರ ಸಂತಸವನ್ನು ಇಮ್ಮಡಿಗೊಳಿಸಿದೆ. ಸದ್ಯ ಅವರು ಧ್ರುವನಕ್ಷತ್ರ' ಕನ್ನಡ ಚಲನಚಿತ್ರ ಹಾಗೂ ಕೊಪ್ಪಂ' ತಮಿಳು ಚಲನಚಿತ್ರದಲ್ಲಿ ನಾಯಕ ನಟನಾಗಿ ಅಭಿನಯಿಸಿದ್ದು, ಎರಡೂ ಚಿತ್ರಗಳು ಬಿಡುಗಡೆಗೆ ಸಿದ್ಧವಾಗಿವೆ.

ಈ ಪ್ರಶಸ್ತಿ ಮನ್ವಿತ್ ಅವರ ಮುಂದಿನ ಚಿತ್ರಗಳ ಮೇಲಿನ ನಿರೀಕ್ಷೆ ಮತ್ತು ಅವರ ಅಭಿನಯ ಬದುಕಿನ ಭರವಸೆಯನ್ನು ಮತ್ತಷ್ಟು ಹೆಚ್ಚಿಸಿದೆ. ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ ಡೆತ್ ಸರ್ಟಿಫಿಕೇಟ್' ಚಿತ್ರದ ತಂಡ ಮನ್ವಿತ್ ಅವರನ್ನು ಅಭಿನಂದಿಸಿದೆ.

### ಶಹಪೂರಪೇಟೆಯಲ್ಲಿ ಜಾತ್ರಾ ವೈಭವ

# ವೀರಭದ್ರೇಶ್ವರ-ಭದ್ರಕಾಳಿ ಕಲ್ಯಾಣೋತ್ಸವಕ್ಕೆ ಭಕ್ತಿಸಾಗರ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಸವೇಶ್ವರ ನಗರದ (ಶಹಪೂರಪೇಟೆ) ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರೀ ವೀರಭದ್ರೇಶ್ವರ ಸ್ವಾಮಿಯ 74ನೇ ಹಾಗೂ ಶ್ರೀ ಭದ್ರಕಾಳಿದೇವಿ ಸಮೇತ 3ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ವಿವಿಧ ಧಾರ್ಮಿಕ ಹಾಗೂ ಸಾಂಪ್ರದಾಯಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಿದವು.

ಜಾತ್ರಾ ಮಹೋತ್ಸವದ ಪ್ರಮುಖ ಕಾರ್ಯಕ್ರಮವಾದ ಶ್ರೀ ವೀರಭದ್ರೇಶ್ವರ ಸ್ವಾಮಿ ಹಾಗೂ ಶ್ರೀ ಭದ್ರಕಾಳಿದೇವಿ ಸಮೇತ ಕಲ್ಯಾಣ ಮಹೋತ್ಸವವು ವೇದಘೋಷ, ಮಂಗಳವಾದ್ಯ ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಜೃಂಭಣೆಯಿಂದ ನೆರವೇರಿತು.

ಪುರೋಹಿತರ ನೇತೃತ್ವದಲ್ಲಿ ಗಣಪತಿ ಪೂಜೆ, ಪುಣ್ಯಾಹವಾಚನ, ಸಂಕಲ್ಪ, ದೇವತಾ ಆವಾಹನೆ ಸೇರಿದಂತೆ ವಿವಿಧ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿ, ವೀರಭದ್ರೇಶ್ವರ ಸ್ವಾಮಿ ಹಾಗೂ ಭದ್ರಕಾಳಿದೇವಿಯ ದೈವಿಕ ಕಲ್ಯಾಣೋತ್ಸವವನ್ನು ಶಾಸ್ತ್ರೋಕ್ತವಾಗಿ ಆಚರಿಸಲಾಯಿತು.

ಸಂಜೆ ದೇವಸ್ಥಾನದ ಕಳಸಾರೋಹಣ ಕಾರ್ಯಕ್ರಮ ಧಾರ್ಮಿಕ ವಿಧಿವಿಧಾನಗಳೊಂದಿಗೆ ನೆರವೇರಿತು. ಪೂಜಾ ಕೈಂಕರ್ಯಗಳ ಬಳಿಕ ಪವಿತ್ರ ಕಳಸವನ್ನು ದೇವಸ್ಥಾನದ ಶಿಖರದ ಮೇಲೆ ಪ್ರತಿಷ್ಠಾಪಿಸಲಾಯಿತು. ಕಳಸಾರೋಹಣವು ದೇವಾಲಯದ ಪಾವಿತ್ರ್ಯ, ಶಕ್ತಿ ಹಾಗೂ ಧಾರ್ಮಿಕ ಚೈತನ್ಯದ ಸಂಕೇತವಾಗಿದ್ದು, ಈ ಸಂದರ್ಭದಲ್ಲಿ ಭಕ್ತರು ದೇವರ ಕೃಪೆ ಹಾಗೂ ನಾಡಿನ ಸುಭಿಕ್ಷಕ್ಕಾಗಿ ಪ್ರಾರ್ಥಿಸಿದರು.



ಇದೇ ಸಂದರ್ಭದಲ್ಲಿ ವಿವಿಧ ಗ್ರಾಮದೇವತೆಗಳಿಗೆ ಉಡಿ ತುಂಬುವ ಸಂಪ್ರದಾಯವೂ ಶ್ರದ್ಧಾಭಕ್ತಿಯಿಂದ ನೆರವೇರಿತು. ಸುಮಂಗಲಿಯರು ಹಾಗೂ ಭಕ್ತರು ಅರಿಶಿನ, ಕುಂಕುಮ, ಹೂವು, ತೆಂಗಿನಕಾಯಿ, ಧಾನ್ಯ ಸೇರಿದಂತೆ ಮಂಗಳದ್ರವ್ಯಗಳನ್ನು ಸಮರ್ಪಿಸಿ ದೇವಿಯರಿಗೆ ಉಡಿ ತುಂಬಿದರು.

ರಾತ್ರಿ ದೀಪಸ್ತಂಭಗಳಿಗೆ ದೀಪೋತ್ಸವ ನಡೆಸಲಾಯಿತು. ಜಾತ್ರಾ ಮಹೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ದಿನವಿಡೀ ವಿಶೇಷ ಪೂಜೆ, ಅಭಿಷೇಕ, ಅಲಂಕಾರ, ಆರತಿ ಹಾಗೂ ಪ್ರಸಾದ ವಿತರಣೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಸುತ್ತಮುತ್ತಲಿನ ಪ್ರದೇಶಗಳಿಂದ ಆಗಮಿಸಿದ್ದ ಅಪಾರ ಸಂಖ್ಯೆಯ ಭಕ್ತರು ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಶ್ರೀ ವೀರಭದ್ರೇಶ್ವರ ಸ್ವಾಮಿ ಹಾಗೂ ಶ್ರೀ ಭದ್ರಕಾಳಿದೇವಿಯ ದರ್ಶನ ಪಡೆದು ಪುನೀತರಾದರು.

ಭಕ್ತಾದಿಗಳಿಗೆ ಮಹಾ ಅನ್ನಸಂತರ್ಪಣೆಯನ್ನೂ ಏರ್ಪಡಿಸಲಾಗಿತ್ತು. ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ರಾಚೋಟಿ ಕಾಡಪ್ಪನವರ, ಉಪಾಧ್ಯಕ್ಷ ರಾಜು ತಡಸದ, ಕಾರ್ಯದರ್ಶಿ ನಾಗರಾಜ ಹಳ್ಳಿಕೇರಿ, ಖಜಾಂಚಿ ವಿಶ್ವನಾಥ ಕೆರಕಣ್ಣವರ ಸೇರಿದಂತೆ ಹಿರಿಯರು, ಮಹಿಳೆಯರು, ಬಸವೇಶ್ವರ ನಗರದ ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ, ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿ, ವರದಾನೇಶ್ವರಿ ಮಹಿಳಾ ಮಂಡಳದ ಸರ್ವ ಪದಾಧಿಕಾರಿಗಳು ಹಾಗೂ ಯುವಕ ಮಂಡಳದ ಸದಸ್ಯರು ಜಾತ್ರಾ ಮಹೋತ್ಸವದ ಯಶಸ್ಸಿಗೆ ಶ್ರಮಿಸಿದರು.

> ಶ್ರೀ ವೀರಭದ್ರೇಶ್ವರ ಸ್ವಾಮಿ ಹಾಗೂ ಶ್ರೀ ಭದ್ರಕಾಳಿದೇವಿಯ ಜಾತ್ರಾ ಮಹೋತ್ಸವವು ಭಕ್ತರ ಶ್ರದ್ಧೆ, ಧಾರ್ಮಿಕ ನಂಬಿಕೆ ಮತ್ತು ನಮ್ಮ ಸಾಂಪ್ರದಾಯಿಕ ಸಂಸ್ಕೃತಿಯ ಪ್ರತೀಕವಾಗಿದೆ. ಎಲ್ಲ ಭಕ್ತರ ಸಹಕಾರದಿಂದ ಜಾತ್ರಾ ಮಹೋತ್ಸವವನ್ನು ಯಶಸ್ವಿಯಾಗಿ ನಡೆಸಲಾಗುತ್ತಿದ್ದು, ಮುಂದಿನ ಕಾರ್ಯಕ್ರಮಗಳಲ್ಲೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳಬೇಕು.
> **- ರಾಚೋಟಿ ಕಾಡಪ್ಪನವರ,**
> ಅಧ್ಯಕ್ಷರು, ಜಾತ್ರಾ ಮಹೋತ್ಸವ ಸಮಿತಿ

ಜಾತ್ರಾ ಮಹೋತ್ಸವದ ಅಂಗವಾಗಿ ಆ. 29ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಲಿದೆ.

ಆ. 31ರಂದು ಸೋಮವಾರ ಬೆಳಿಗ್ಗೆ ರುದ್ರಾಭಿಷೇಕ ಹಾಗೂ ಸಂಜೆ 6.15 ಗಂಟೆಗೆ ಮಹಾರಥೋತ್ಸವ ಜರುಗಲಿದೆ. ಸೆಪ್ಟೆಂಬರ್ 1ರಂದು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಅಗ್ನಿ ಪ್ರವೇಶ ಹಾಗೂ ಸಂಜೆ 6.15 ಗಂಟೆಗೆ ಲಘುರಥೋತ್ಸವ ನಡೆಯಲಿದೆ.

ಸೆಪ್ಟೆಂಬರ್ 4ರಂದು ಶುಕ್ರವಾರ ಮಧ್ಯಾಹ್ನ 1 ಗಂಟೆಗೆ ಮಹಾಪ್ರಸಾದ ಹಾಗೂ ಸೆಪ್ಟೆಂಬರ್ 8ರಂದು ಸಂಜೆ 7.30 ಗಂಟೆಗೆ ದೀಪಾಲಂಕಾರದೊಂದಿಗೆ ಪಾಲಕಿ ಉತ್ಸವ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿ ತಿಳಿಸಿದೆ.

## ಸಂಕ್ಷಿಪ್ತ ಸುದ್ದಿಗಳು

### ಐಟಿಐ ತರಬೇತಿಯಿಂದ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ವೆಂಕಟೇಶ ಕುಲಕರ್ಣಿ ಕರೆ

# ಕಲಿತ ಕೌಶಲ್ಯವನ್ನೇ ಆದಾಯದ ಮೂಲವಾಗಿಸಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿಗಳು ಐಟಿಐನಲ್ಲಿ ಪಡೆಯುವ ತಾಂತ್ರಿಕ ಜ್ಞಾನ ಹಾಗೂ ಕೌಶಲ್ಯವನ್ನು ಕೇವಲ ಉದ್ಯೋಗಕ್ಕೆ ಸೀಮಿತಗೊಳಿಸದೆ, ಅದನ್ನೇ ಆದಾಯದ ಮೂಲವನ್ನಾಗಿ ಪರಿವರ್ತಿಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಉದ್ಯಮಿ ವೆಂಕಟೇಶ ಕುಲಕರ್ಣಿ ಹೇಳಿದರು.

ಸಮೀಪದ ಕೋಟುಮುಚಗಿ ಗ್ರಾಮದ ಶ್ರೀ ಮಲ್ಲಿಕಾರ್ಜುನ ಎಜುಕೇಶನಲ್ ಟ್ರಸ್ಟ್ ಆಶ್ರಯದ ಶ್ರೀ ಸೋಮೇಶ್ವರ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಗುರುವಾರ ನಡೆದ 2026–27ನೇ ಸಾಲಿನ ಪ್ರಥಮ ವರ್ಷದ ತರಬೇತಾರ್ಥಿಗಳ ಶೈಕ್ಷಣಿಕ ವರ್ಷದ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು. ಅತಿಥಿ ಶ್ರೀಧರ ಕುಲಕರ್ಣಿ ಮಾತನಾಡಿ, ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ನೈತಿಕತೆ, ಶಿಸ್ತು, ಸಾಮಾಜಿಕ ಹೊಣೆಗಾರಿಕೆ ಹಾಗೂ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಂಡು ಸಮಾಜಕ್ಕೆ ಉಪಯುಕ್ತ ನಾಗರಿಕರಾಗಬೇಕು ಎಂದರು. ಇನ್ನೋರ್ವ ಅತಿಥಿ ಪ್ರಕಾಶ ಕುಲಕರ್ಣಿ ಮಾತನಾಡಿ, ಯಾವುದೇ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಕರ್ತವ್ಯನಿಷ್ಠೆ, ಪ್ರಾಮಾಣಿಕತೆ ಹಾಗೂ ನಿರಂತರ ಪರಿಶ್ರಮ ಅಗತ್ಯವಾಗಿದೆ. ವಿದ್ಯಾರ್ಥಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಕಲಿಕೆಯ ಅವಧಿಯನ್ನು ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಮಲ್ಲಿಕಾರ್ಜುನ ಎಜುಕೇಶನಲ್ ಟ್ರಸ್ಟ್‌ನ ಕಾರ್ಯದರ್ಶಿ ನಾಗರಾಜ ಕುಲಕರ್ಣಿ ವಹಿಸಿದ್ದರು. ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ವಿದ್ಯಾರ್ಥಿನಿ ಐಶ್ವರ್ಯ ಹಾಗೂ ಸಂಗಡಿಗರು ಪ್ರಾರ್ಥಿಸಿದರು.

ಸಂಸ್ಥೆಯ ಪ್ರಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿ, ಸಂಸ್ಥೆಯ ಶೈಕ್ಷಣಿಕ ಚಟುವಟಿಕೆಗಳು ಹಾಗೂ ತರಬೇತಿಯ ಉದ್ದೇಶಗಳ ಕುರಿತು ವಿವರಿಸಿದರು. ಶಿಕ್ಷಕ ಸಿ.ಆರ್. ಹಾಲಗಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಸಂಸ್ಥೆಯಲ್ಲಿ ಹೊಲಿಗೆ ತರಬೇತಿ ಪಡೆದ ತರಬೇತಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಮುರಳಿಧರ, ಭೀಮಸೇನ್, ಶಿಕ್ಷಕಿಯರಾದ ಮಂಜುಳಾ ಹುಳ್ಳಿ, ಪ್ರತಿಮಾ ಪತ್ತಾರ ಸೇರಿದಂತೆ ಸಂಸ್ಥೆಯ ಸಿಬ್ಬಂದಿ, ತರಬೇತಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

> ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ತಾಂತ್ರಿಕ ಜ್ಞಾನ ಮತ್ತು ಕೌಶಲ್ಯ ಹೊಂದಿರುವ ಯುವಕರಿಗೆ ಅಪಾರ ಅವಕಾಶಗಳಿವೆ. ಐಟಿಐನಲ್ಲಿ ಕಲಿತ ವಿದ್ಯೆ ಹಾಗೂ ಕೌಶಲ್ಯವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡರೆ ಉದ್ಯೋಗ ಅರಸುವವರಾಗುವುದಕ್ಕಿಂತ ಉದ್ಯೋಗ ಸೃಷ್ಟಿಸುವವರಾಗಿಯೂ ಬೆಳೆಯಬಹುದು. ಆದ್ದರಿಂದ ವಿದ್ಯಾರ್ಥಿಗಳು ಕಲಿತ ವಿದ್ಯೆಯನ್ನು ಆದಾಯದ ಮೂಲವನ್ನಾಗಿ ಪರಿವರ್ತಿಸಿಕೊಂಡು ಜೀವನದಲ್ಲಿ ಏಳಿಗೆ ಹೊಂದಬೇಕು.
> – **ವೆಂಕಟೇಶ ಕುಲಕರ್ಣಿ**, ಉದ್ಯಮಿ

# ಅಂಧ, ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರದ ವತಿಯಿಂದ ನಡೆಯುತ್ತಿರುವ ಮೈಸೂರಿನ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಎರಡು ವರ್ಷಗಳ ವಿಶೇಷ ಡಿ.ಎಡ್. ತರಬೇತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 1 ಕೊನೆಯ ದಿನವಾಗಿದೆ. ಈ ವಿಶೇಷ ಡಿ.ಎಡ್. ತರಬೇತಿಯು ಸಾಮಾನ್ಯ ಡಿ.ಎಡ್.ಗೆ ಸಮಾನಾಂತರವಾಗಿದ್ದು, ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 50 ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ಆಸಕ್ತ ಅಭ್ಯರ್ಥಿಗಳು ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿ ಕಾರ್ಯಕ್ರಮವು ರೆಗ್ಯುಲರ್ ಆಗಿದ್ದು, ವಿಕಲಚೇತನರು ಸೇರಿದಂತೆ ಸಾಮಾನ್ಯ ವಿದ್ಯಾರ್ಥಿಗಳೂ ಅರ್ಜಿ ಸಲ್ಲಿಸಲು ಅವಕಾಶವಿದೆ. ತರಬೇತಿಯು ಸಂಪೂರ್ಣ ಉಚಿತವಾಗಿದ್ದು, ಯಾವುದೇ ಬೋಧನಾ ಶುಲ್ಕ ಇರುವುದಿಲ್ಲ.

**ಉದ್ಯೋಗಾವಕಾಶಗಳು:** ಈ ತರಬೇತಿ ಪೂರ್ಣಗೊಳಿಸಿದ ಅಭ್ಯರ್ಥಿಗಳು ರಾಜ್ಯ ಸರ್ಕಾರದ ಸಾಮಾನ್ಯ ಹಾಗೂ ವಿಶೇಷ ಶಾಲೆಗಳಲ್ಲಿ ಶಿಕ್ಷಕರಾಗಿ ಕಾರ್ಯನಿರ್ವಹಿಸಬಹುದಾಗಿದೆ. ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಉದ್ಯೋಗಾವಕಾಶಗಳಿವೆ. ಅಲ್ಲದೆ, ಸಿಬಿಎಸ್‌ಇ ಶಾಲೆಗಳಲ್ಲಿ ಶಿಕ್ಷಕರಾಗಿ, ಸರ್ವ ಶಿಕ್ಷಣ ಅಭಿಯಾನದಲ್ಲಿ ಸಂಪನ್ಮೂಲ ಶಿಕ್ಷಕರಾಗಿ, ಜಿಲ್ಲಾ ಆಸ್ಪತ್ರೆಗಳಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಯನಿರ್ವಹಿಸುವ ಅವಕಾಶವಿದೆ. ರಾಷ್ಟ್ರೀಯ ಹಾಗೂ ಪ್ರಾದೇಶಿಕ ಸಂಸ್ಥೆಗಳಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಮತ್ತು ಮಾತಿನ ತರಬೇತಿ ಘಟಕಗಳಲ್ಲಿಯೂ ಸೇವೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರದ ಕಚೇರಿಯ ಉಪ ನಿರ್ದೇಶಕರು (ತರಬೇತಿ) ಅವರನ್ನು ದೂರವಾಣಿ ಸಂಖ್ಯೆ 0821–2491600ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀಮತಿ ಶ್ರೀದೇವಿ ಎಸ್.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ₹218 ಕೋಟಿಗೂ ಅಧಿಕ ಬೆಳೆ ನಷ್ಟ; ಎಲ್ಲ ತಾಲೂಕುಗಳಿಗೆ ಪರಿಹಾರ ನೀಡಲು ರಾಜು ಕುರುಡಗಿ ಒತ್ತಾಯ

# ಎಲ್ಲಾ ತಾಲೂಕುಗಳ ಬರ ಘೋಷಣೆಗೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆ ಕೈಕೊಟ್ಟು ಮುಂಗಾರು ಬೆಳೆಗಳು ಹಾನಿಗೊಂಡು ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಬಿಜೆಪಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಈ ಕುರಿತು ಶುಕ್ರವಾರ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಜಿಲ್ಲೆಯಲ್ಲಿ ಹೆಸರು, ಗೋವಿನಜೋಳ, ಹತ್ತಿ, ಈರುಳ್ಳಿ, ಸೋಯಾಬಿನ್, ಉದ್ದು ಹಾಗೂ ಶೇಂಗಾ ಸೇರಿದಂತೆ ವಿವಿಧ ಬೆಳೆಗಳನ್ನು ರೈತರು ಬಿತ್ತನೆ ಮಾಡಿದ್ದರು. ಆದರೆ ನಿರೀಕ್ಷಿತ ಮಳೆಯಾಗದೆ ಬಹುತೇಕ ಬೆಳೆಗಳು ಹಾನಿಗೊಳಗಾಗಿವೆ ಎಂದು ತಿಳಿಸಿದ್ದಾರೆ. ಪ್ರತಿ ಎಕರೆಗೆ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಹಾಗೂ ಕೂಲಿಗಾಗಿ ರೈತರು ₹15 ಸಾವಿರದಿಂದ ₹25 ಸಾವಿರದವರೆಗೆ ವೆಚ್ಚ ಮಾಡಿದ್ದಾರೆ. ಇದೀಗ ಬೆಳೆ ಕೈಕೊಟ್ಟಿರುವುದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದ್ದಾರೆ. ಗದಗ, ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ, ರೋಣ, ಗಜೇಂದ್ರಗಡ ಹಾಗೂ ನರಗುಂದ ತಾಲೂಕುಗಳ ಹಲವು ಪ್ರದೇಶಗಳಲ್ಲಿ ಬೆಳೆ ಹಾನಿ ತೀವ್ರವಾಗಿದೆ. ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳ ಜಂಟಿ ಸಮೀಕ್ಷೆಯಲ್ಲಿ ಜಿಲ್ಲಾದ್ಯಂತ ₹218 ಕೋಟಿಗೂ ಅಧಿಕ ಬೆಳೆ ನಷ್ಟ ದಾಖಲಾಗಿದೆ ಎಂದು ತಿಳಿಸಿದ್ದಾರೆ.

### ಬಹುದಿನಗಳ ಹೋರಾಟಕ್ಕೆ ಸಿಕ್ಕ ಫಲ; ಹೊಸಪೇಟೆ–ಅರಸೀಕೆರೆ ರೈಲು ಸೇವೆಗೆ ಜನರಿಂದ ಭರ್ಜರಿ ಸ್ವಾಗತ

# ಹಗರಿಬೊಮ್ಮನಹಳ್ಳಿಗೆ ಡೆಮು ರೈಲು ಎಂಟ್ರಿ; ಸಂಭ್ರಮದ ಸ್ವಾಗತ..!

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**



ಬಹುದಿನಗಳ ನಿರೀಕ್ಷೆ, ನಿರಂತರ ಹೋರಾಟ ಮತ್ತು ಜನರ ಒಗ್ಗಟ್ಟಿನ ಫಲವಾಗಿ ಹೊಸಪೇಟೆಅರಸೀಕೆರೆ ನಡುವೆ ಸಂಚರಿಸುವ ಡೆಮು ರೈಲು ಹಗರಿಬೊಮ್ಮನಹಳ್ಳಿ ರೈಲು ನಿಲ್ದಾಣಕ್ಕೆ ಆಗಮಿಸುತ್ತಿದ್ದಂತೆ ಸಂಭ್ರಮ ಮನೆ ಮಾಡಿತು. ಸಾರ್ವಜನಿಕರು, ರೈಲ್ವೆ ಪ್ರಯಾಣಿಕರು, ಹೋರಾಟಗಾರರು ಹಾಗೂ ವಿವಿಧ ಸಂಘಸಂಸ್ಥೆಗಳ ಮುಖಂಡರು ರೈಲಿಗೆ ಭವ್ಯ ಸ್ವಾಗತ ಕೋರಿದರು.

ಬೆಳಿಗ್ಗೆ ಸುಮಾರು 7.30ಕ್ಕೆ ರೈಲು ಹಗರಿಬೊಮ್ಮನಹಳ್ಳಿ ರೈಲು ನಿಲ್ದಾಣಕ್ಕೆ ಆಗಮಿಸುತ್ತಿದ್ದಂತೆ ನಿಲ್ದಾಣದಲ್ಲಿ ಹರ್ಷೋದ್ಗಾರ ಮೊಳಗಿತು. ಬಹು ನಿರೀಕ್ಷಿತ ರೈಲು ಸೇವೆ ಆರಂಭವಾಗಿರುವುದು ಈ ಭಾಗದ ಜನತೆಗೆ ಹೊಸ ಸಂಚಾರದ ಆಶಾಭಾವನೆ ಮೂಡಿಸಿದೆ.

ನಂದಿಪುರದ ಪರಮಪೂಜ್ಯ ಡಾ. ಮಹೇಶ್ವರ ಮಹಾಸ್ವಾಮಿಗಳು ಪುಷ್ಪ ನಮನ ಸಲ್ಲಿಸುವ ಮೂಲಕ ನೂತನ ರೈಲು ಸೇವೆಯನ್ನು ಸ್ವಾಗತಿಸಿದರು. ಇಂದಿನ ರೈಲ್ವೆ ಸೌಲಭ್ಯದ ಹಿಂದೆ ಅನೇಕ ಜನರ ಶ್ರಮ, ಹೋರಾಟ ಮತ್ತು ಸಹಕಾರ ಅಡಗಿದೆ ಎಂದು ಅವರು ಸ್ಮರಿಸಿದರು.

ರೈಲ್ವೆ ಸಂಪರ್ಕಕ್ಕಾಗಿ ನಡೆದ ಹೋರಾಟದ ಪ್ರತಿಯೊಂದು ಹಂತದಲ್ಲೂ ಸಾರ್ವಜನಿಕರು ತಮ್ಮ ಸಮಯ, ಶ್ರಮ ಹಾಗೂ ಸಹಕಾರ ನೀಡಿದ್ದಾರೆ. ರೈಲ್ವೆ ಹೋರಾಟ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು, ಗುರುಹಿರಿಯರು, ವಿವಿಧ ಸಂಘಸಂಸ್ಥೆಗಳು, ಯುವಕರು ಹಾಗೂ ಪತ್ರಕರ್ತರು ಮತ್ತು ಮಾಧ್ಯಮ ಮಿತ್ರರ ಸಹಕಾರದಿಂದಲೇ ಈ ಯಶಸ್ಸು ಸಾಧ್ಯವಾಗಿದೆ ಎಂದು ತಿಳಿಸಿದರು. ರೈಲ್ವೆ ಹೋರಾಟ ಸಮಿತಿಯ ಸಂಚಾಲಕ ಕೊಟ್ರೇಶ್ ಶೆಟ್ಟರ್ ಮಾತನಾಡಿ, ಹೊಸಪೇಟೆಅರಸೀಕೆರೆ ಡೆಮು ರೈಲು ಆರಂಭವಾಗಿರುವುದು ಈ ಭಾಗದ ನಾಗರಿಕರಿಗೆ ಅತ್ಯಂತ ಅನುಕೂಲಕರವಾಗಿದೆ ಎಂದರು.

ತುಮಕೂರು ಹಾಗೂ ಬೆಂಗಳೂರಿಗೆ ನೇರ ರೈಲು ಸಂಪರ್ಕ ಕಲ್ಪಿಸುವಂತೆ ಬಹುಕಾಲದಿಂದ ಬೇಡಿಕೆ ಸಲ್ಲಿಸಲಾಗುತ್ತಿತ್ತು. ಸದ್ಯ ಅರಸೀಕೆರೆವರೆಗೆ ಸಂಪರ್ಕ ದೊರೆತಿದ್ದು, ಮುಂದಿನ ಹಂತದಲ್ಲಿ ಮೈಸೂರು ಸೇರಿದಂತೆ ಇನ್ನಷ್ಟು ಪ್ರಮುಖ ನಗರಗಳಿಗೆ ನೇರ ರೈಲು ಸಂಪರ್ಕ ಕಲ್ಪಿಸುವಂತೆ ಹೋರಾಟ ಮುಂದುವರಿಸಲಾಗುವುದು ಎಂದು ಹೇಳಿದರು.

ಸತ್ಸಂಗ ಸಮಿತಿಯ ಹಿರಿಯ ನಾಗರಿಕ ಜಿ. ಲಕ್ಷ್ಮೀಪತಿ ಮಾತನಾಡಿ, ಇಂದಿನ ರೈಲ್ವೆ ಸೌಲಭ್ಯಗಳ ಹಿಂದೆ ರೈಲ್ವೆ ಹೋರಾಟ ಸಮಿತಿಯ ನಿರಂತರ ಶ್ರಮವಿದೆ. ಅಧಿಕಾರಿಗಳನ್ನು ಸಂಪರ್ಕಿಸಿ, ನಿರಂತರವಾಗಿ ಬೇಡಿಕೆಗಳನ್ನು ಮುಂದಿಟ್ಟ ಪರಿಣಾಮವಾಗಿ ಹಲವು ರೈಲ್ವೆ ಸೌಲಭ್ಯಗಳು ದೊರೆತಿವೆ ಎಂದು ತಿಳಿಸಿದರು.

ವಿಜಯನಗರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಬಾದಾಮಿ ಮೃತ್ಯುಂಜಯ ಮಾತನಾಡಿ, ಹೊಸಪೇಟೆ–ಅರಸೀಕೆರೆ ರೈಲು ಸೇವೆಯಿಂದ ಈ ಭಾಗದ ಜನರಿಗೆ ಸಾಕಷ್ಟು ಅನುಕೂಲವಾಗಿದೆ. ಮುಂದಿನ ದಿನಗಳಲ್ಲಿ ಮೈಸೂರು ಸೇರಿದಂತೆ ಪ್ರಮುಖ ನಗರಗಳಿಗೆ ನೇರ ರೈಲು ಸಂಪರ್ಕ ಕಲ್ಪಿಸುವ ನಿಟ್ಟಿನಲ್ಲಿ ಪ್ರಯತ್ನ ನಡೆಯಬೇಕು ಎಂದು ಒತ್ತಾಯಿಸಿದರು. ಡಿಶ್ ಮಂಜುನಾಥ್ ಮಾತನಾಡಿ, ಬಹುದಿನಗಳ ಕನಸು ಇಂದು ನನಸಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ಮನಸಿ ದೇವರಾಜ್ ರೈಲು ಸೇವೆ ಉಳಿಸಿಕೊಳ್ಳಲು ಈ ಹಿಂದೆ ನಡೆದ ಹೋರಾಟಗಳನ್ನು ಸ್ಮರಿಸಿದರು.

ನ್ಯಾರೋ ಗೇಜ್ ರೈಲು ಸೇವೆ ರದ್ದಾದ ಸಂದರ್ಭದಲ್ಲಿ ರೈಲು ಮಾರ್ಗ ಉಳಿಸುವ ವಿಚಾರವಾಗಿ ಹೋರಾಟ ನಡೆದಿತ್ತು. ನಂದಿಪುರದ ಪೂಜ್ಯ ಶ್ರೀರಂತಪ್ಪಜ್ಜ ಸ್ವಾಮೀಜಿ ಸೇರಿದಂತೆ ಅನೇಕ ನಾಗರಿಕರು ಹೋರಾಟಕ್ಕೆ ಧುಮುಕಿದ್ದರು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ವಕೀಲ ಸತ್ಯನಾರಾಯಣ, ರೈಲ್ವೆ ಹೋರಾಟಗಾರರ ಸಮಿತಿಯ ಸದಸ್ಯರು, ಆಟೋ ಸಂಘದ ಕೈಲಾಸ್ ಹಾಗೂ ಸತೀಶ್ ಪಾಟೀಲ್ ಸೇರಿದಂತೆ ಹಲವರು ಮಾತನಾಡಿ, ಮುಂದಿನ ದಿನಗಳಲ್ಲಿ ಧರ್ಮಸ್ಥಳ, ಶಿವಮೊಗ್ಗ, ಮೈಸೂರು ಸೇರಿದಂತೆ ಪ್ರಮುಖ ಸ್ಥಳಗಳಿಗೆ ರೈಲು ಸಂಪರ್ಕ ವಿಸ್ತರಿಸಿದರೆ ಸಾರ್ವಜನಿಕರಿಗೆ ಇನ್ನಷ್ಟು ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ವೈ. ಮಲ್ಲಿಕಾರ್ಜುನ್, ಕೆ. ಮೈಲಾರಪ್ಪ, ಆಡಿಟರ್ ನಟರಾಜ್, ಅಕ್ಕಿ ಶಿವಣ್ಣ, ನೀಲಕಂಠಪ್ಪ, ವಿರೂಪಾಕ್ಷಪ್ಪ, ಹೊನ್ನೂರಪ್ಪ, ಚಿನ್ನಪ್ಪ ಮಲ್ಕಿ ಒಡೆಯರ್ ಸೇರಿದಂತೆ ವಿವಿಧ ಸಂಘಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ರೈಲ್ವೆ ಹೋರಾಟ ಸಮಿತಿಯ ಸದಸ್ಯರು, ಪತ್ರಕರ್ತರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಉಪಸ್ಥಿತರಿದ್ದರು.

> ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಡೆಮು ರೈಲಿನಲ್ಲಿ ಪ್ರಯಾಣಿಸಿದರೆ ಈ ಸೇವೆ ಮತ್ತಷ್ಟು ಬಲಗೊಳ್ಳಲಿದೆ. ಮುಂದಿನ ದಿನಗಳಲ್ಲಿ ಡಬಲ್ ಲೈನ್, ವಿದ್ಯುದೀಕರಣ ಹಾಗೂ ಕಡಿಮೆ ಸಮಯದಲ್ಲಿ ವೇಗವಾಗಿ ಪ್ರಯಾಣಿಸುವಂತಹ ರೈಲು ಸೌಲಭ್ಯಗಳು ಈ ಭಾಗಕ್ಕೆ ದೊರೆಯಬೇಕು.
> – **ಡಾ. ಮಹೇಶ್ವರ ಮಹಾಸ್ವಾಮಿಗಳು**

# ಅಂಚೆ ಜೀವ ವಿಮೆ ಸೌಲಭ್ಯಕ್ಕೆ ಮತ್ತಷ್ಟು ವಿಸ್ತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಅಂಚೆ ಜೀವ ವಿಮೆ (ಆರ್‌ಪಿಎಲ್‌ಐ) ಸೌಲಭ್ಯವನ್ನು ಮತ್ತಷ್ಟು ಸರಳೀಕರಣಗೊಳಿಸಿ ವಿಸ್ತರಿಸಲಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಶಾಶ್ವತವಾಗಿ ವಾಸಿಸುವುದು ಕಡ್ಡಾಯ ಎಂಬ ಹಿಂದಿನ ಷರತ್ತನ್ನು ಸಡಿಲಿಸಲಾಗಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ತಿಳಿಸಿದ್ದಾರೆ. ಈ ಹಿಂದೆ ಗ್ರಾಮೀಣ ಪ್ರದೇಶದಲ್ಲಿ ಶಾಶ್ವತವಾಗಿ ವಾಸಿಸುವ ಅರ್ಹ ವ್ಯಕ್ತಿಗಳಿಗೆ ಮಾತ್ರ ಗ್ರಾಮೀಣ ಅಂಚೆ ಜೀವ ವಿಮೆ ಸೌಲಭ್ಯ ಪಡೆಯಲು ಅವಕಾಶವಿತ್ತು. ಆದರೆ, ಹೊಸ ನಿಯಮಗಳನ್ವಯ ಗ್ರಾಮೀಣ ವಾಸಸ್ಥಳದ ಕಡ್ಡಾಯ ಷರತ್ತನ್ನು ಸಡಿಲಿಸಲಾಗಿದ್ದು, ಈವರೆಗೆ ಈ ನಿರ್ಬಂಧದಿಂದಾಗಿ ಯೋಜನೆಯ ಸೌಲಭ್ಯದಿಂದ ವಂಚಿತರಾಗಿದ್ದ ಸಾರ್ವಜನಿಕರಿಗೂ ಪ್ರಯೋಜನವಾಗಲಿದೆ. ಗ್ರಾಮೀಣ ಹಾಗೂ ಅರೆನಗರ ಪ್ರದೇಶಗಳ ಸಾರ್ವಜನಿಕರು ಈ ವಿಶೇಷ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಹಾಗೂ ಕುಟುಂಬದ ಭವಿಷ್ಯವನ್ನು ಸುರಕ್ಷಿತಗೊಳಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಮೀಪದ ಅಂಚೆ ಕಚೇರಿಯನ್ನು ಸಂಪರ್ಕಿಸುವಂತೆ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ಕೋರಿದ್ದಾರೆ.

# ಮೌಲಾನಾ ಆಜಾದ್ ಮಾದರಿ ಶಾಲೆಗೆ ನಿವೇಶನ ಮಂಜೂರು: ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಲಕ್ಷ್ಮೇಶ್ವರ ಪುರಸಭೆ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಮೌಲಾನಾ ಆಜಾದ್ ಮಾದರಿ ಶಾಲೆ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನ ಮಂಜೂರು ಮಾಡಲು ಉದ್ದೇಶಿಸಲಾಗಿದ್ದು, ಈ ಕುರಿತು ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಲಕ್ಷ್ಮೇಶ್ವರ ಪುರಸಭೆಯ ವಾರ್ಡ್ ನಂ. 4ರ ಸರ್ವೆ ನಂ. 74ರ ಪ್ಲಾಟ್ ನಂ. 245ರಲ್ಲಿ ಒಟ್ಟು 26 ಗುಂಟೆ ವಿಸ್ತೀರ್ಣದ ನಿವೇಶನವನ್ನು ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಜುಲೈ 18ರಂದು ನಡೆದ ಪುರಸಭೆಯ ಠರಾವು ಹಾಗೂ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಈ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಮೌಲಾನಾ ಆಜಾದ್ ಮಾದರಿ ಶಾಲೆಯ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನ ಮಂಜೂರು ಮಾಡುವ ಕುರಿತು ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಾರ್ವಜನಿಕರಿಗೆ ಆಕ್ಷೇಪಣೆಗಳಿದ್ದಲ್ಲಿ, ಈ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 30 ದಿನಗಳೊಳಗಾಗಿ ಸೂಕ್ತ ದಾಖಲೆಗಳೊಂದಿಗೆ ಲಿಖಿತ ಆಕ್ಷೇಪಣೆಗಳನ್ನು ಲಕ್ಷ್ಮೇಶ್ವರ ಪುರಸಭೆ ಕಚೇರಿಗೆ ಸಲ್ಲಿಸಬಹುದಾಗಿದೆ. ನಿಗದಿತ ಅವಧಿ ಮುಗಿದ ನಂತರ ಸಲ್ಲಿಸಲಾಗುವ ಯಾವುದೇ ದೂರು ಅಥವಾ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪುರಸಭೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಲಕ್ಷ್ಮೇಶ್ವರ ಪುರಸಭೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಾಬ್ ಕಾರ್ಡ್ ಮೇಳದ ಮೂಲಕ ಗ್ರಾಮೀಣ ಕೂಲಿಕಾರರಲ್ಲಿ ಜಾಗೃತಿ ಅಭಿಯಾನ

# ದಾಖಲೆ ನೀಡಿ ಜಾಬ್ ಕಾರ್ಡ್ ಪಡೆಯಿರಿ



**ವಿಜಯಸಾಕ್ಷಿ ಸುದ್ದಿ, ಗದಗ**

ವಿಬಿಜಿ ರಾಮ್‌ಜಿ ಯೋಜನೆಯಡಿ ಇನ್ನೂ ನೋಂದಣಿಯಾಗದ ಕೂಲಿಕಾರರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಹೊಸ ಜಾಬ್ ಕಾರ್ಡ್ ಪಡೆದುಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ನಿರ್ದೇಶಕ (ವಿಬಿಜಿ ರಾಮ್‌ಜಿ) ಕುಮಾರ ಪುಜಾರ ಕರೆ ನೀಡಿದರು.

ತಾಲೂಕಿನ ಲಕ್ಕುಂಡಿ ಗ್ರಾಮದ ದಂಡಿನ ದುರ್ಗಾದೇವಿ ಕೆರೆಯಿಂದ ಮೊಟ ಬಸಪ್ಪ ಗುಡಿಯವರೆಗೆ ನೀರು ಹರಿಯುವ ಕೋಡಿ ಅಭಿವೃದ್ಧಿ ಕಾಮಗಾರಿಯ ಸ್ಥಳಕ್ಕೆ ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ವಿಕಸಿತ ಭಾರತಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ)' ಕಾಯ್ದೆಯ ಐಇಸಿ ಚಟುವಟಿಕೆಯಡಿ ಹಮ್ಮಿಕೊಂಡಿದ್ದ ಜಾಬ್ ಕಾರ್ಡ್ ಮೇಳದ ಅಂಗವಾಗಿ ನಡೆದ ಸಭೆಯಲ್ಲಿ ಮಾತನಾಡಿದರು. ವಿಬಿಜಿ ರಾಮ್‌ಜಿ ಯೋಜನೆಯಡಿ ಗ್ರಾಮೀಣ ಜನರು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸಕ್ಕೆ ಹಾಜರಾಗಬೇಕು. ಜೊತೆಗೆ ಯೋಜನೆಯಡಿ ಲಭ್ಯವಿರುವ ವೈಯಕ್ತಿಕ ಕಾಮಗಾರಿಗಳ ಸೌಲಭ್ಯವನ್ನೂ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಗ್ರಾಮೀಣ ಕೂಲಿಕಾರರಿಗೆ ಆದ್ಯತೆಯ ಮೇರೆಗೆ ಶೇ.100ರಷ್ಟು ಉದ್ಯೋಗ ಒದಗಿಸುವ ಉದ್ದೇಶದಿಂದ ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಹಂತದಲ್ಲಿ ಕ್ರಿಯಾ ಯೋಜನೆಗಳನ್ನು ರೂಪಿಸಲಾಗಿದೆ ಎಂದು ಕುಮಾರ ಪುಜಾರ ಹೇಳಿದರು.

ಜಾಬ್ ಕಾರ್ಡ್ ಮೇಳದ ಮೂಲಕ ಈಗಾಗಲೇ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾಕಷ್ಟು ಜನರು ಹೊಸ ಜಾಬ್ ಕಾರ್ಡ್‌ಗಾಗಿ ನೋಂದಣಿ ಮಾಡಿಕೊಂಡಿದ್ದಾರೆ. ಕೆಲ ಕುಟುಂಬಗಳಲ್ಲಿ ಕುಟುಂಬ ವಿಭಜನೆ ಸೇರಿದಂತೆ ವಿವಿಧ ತಾಂತ್ರಿಕ ಸಮಸ್ಯೆಗಳು ಹಾಗೂ ಕುಂದುಕೊರತೆಗಳಿದ್ದು, ಅವುಗಳಿಗೆ ಹಂತ ಹಂತವಾಗಿ ಪರಿಹಾರ ಕಂಡುಕೊಳ್ಳ ಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಮೀರ್ ನಾಯಕ ಮಾತನಾಡಿ, ಜಾಬ್ ಕಾರ್ಡ್ ಹೊಂದಿರುವ ಪ್ರತಿಯೊಂದು ಗ್ರಾಮೀಣ ಕುಟುಂಬವು ವರ್ಷದಲ್ಲಿ 125 ದಿನಗಳ ಉದ್ಯೋಗ ಪಡೆಯುವ ಕಾನೂನು ಬದ್ಧ ಹಕ್ಕನ್ನು ಹೊಂದಿದೆ ಎಂದು ತಿಳಿಸಿದರು.

ಉದ್ಯೋಗಕ್ಕಾಗಿ ದೂರದ ಊರುಗಳಿಗೆ ವಲಸೆ ಹೋಗಿ ಕಷ್ಟ–ನಷ್ಟ ಅನುಭವಿಸುವ ಅಗತ್ಯವಿಲ್ಲ. ತಮ್ಮ ಸ್ವಂತ ಗ್ರಾಮದಲ್ಲಿಯೇ ವಿಬಿಜಿ ರಾಮ್‌ಜಿ ಯೋಜನೆಯಡಿ ನಡೆಯುವ ಕಾಮಗಾರಿಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಆರ್ಥಿಕ ಸ್ವಾವಲಂಬನೆ ಸಾಧಿಸಬೇಕು ಎಂದು ಸಲಹೆ ನೀಡಿದರು.

ತಾಲೂಕು ಪಂಚಾಯಿತಿಯ ಐಇಸಿ ಸಂಯೋಜಕ ವೀರೇಶ ಬಸನಗೌಡ್ರ, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

> ವಿಬಿಜಿ ರಾಮ್‌ಜಿ ಯೋಜನೆಯಡಿ ಇನ್ನೂ ನೋಂದಣಿಯಾಗದ ಕೂಲಿಕಾರರು ಅಗತ್ಯ ದಾಖಲೆಗಳನ್ನು ಗ್ರಾಮ ಪಂಚಾಯಿತಿಗೆ ಸಲ್ಲಿಸಿ ಜಾಬ್ ಕಾರ್ಡ್ ಪಡೆದುಕೊಳ್ಳಬೇಕು. ಉದ್ಯೋಗದ ಹಕ್ಕನ್ನು ಬಳಸಿಕೊಂಡು ತಮ್ಮ ಊರಿನಲ್ಲಿಯೇ ಕೆಲಸ ಮಾಡಿ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು.
> – **ಕುಮಾರ ಪುಜಾರ,**
> ತಾಪಂ ನಿರ್ದೇಶಕ (ವಿಬಿಜಿ ರಾಮ್‌ಜಿ)

### ಶ್ರೀ ಪಾಂಡುರಂಗರಕುಮಾಯಿ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಅಪರೂಪದ ಧಾರ್ಮಿಕ ಕಾರ್ಯಕ್ರಮ

# ಲಕ್ಷ್ಮೇಶ್ವರದಲ್ಲಿ ಮೊಳಗಿದ ಮಂಚರಿಗಾಥಾ ಭಜನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ ನಡೆಯುತ್ತಿರುವ ಶ್ರಾವಣ ಮಾಸದ ಶ್ರೀ ಜ್ಞಾನೇಶ್ವರಿ ಪಾರಾಯಣದ ರಜತ ಮಹೋತ್ಸವ ಹಾಗೂ ಶ್ರೀ ಪಾಂಡುರಂಗರಕುಮಾಯಿ ನೂತನ ಮೂರ್ತಿಗಳ ಪ್ರತಿಷ್ಠಾಪನಾ ಮಹೋತ್ಸವದ ಅಂಗವಾಗಿ ನಡೆಯುತ್ತಿರುವ ಅಪರೂಪದ ಮಂಚರಿಗಾಥಾ ಭಜನೆ ಸಾವಿರಾರು ಭಕ್ತರನ್ನು ತನ್ನತ್ತ ಸೆಳೆಯುತ್ತಿದೆ.ಕಳೆದ ಮಂಗಳವಾರದಿಂದ ಆರಂಭವಾಗಿರುವ ಐದು ದಿನಗಳ ಧಾರ್ಮಿಕ ಕಾರ್ಯಕ್ರಮಗಳು ಶನಿವಾರ ಸಮಾರೋಪಗೊಳ್ಳಲಿದ್ದು, ಪ್ರತಿಷ್ಠಾಪನಾ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿ ಮಂಚರಿಗಾಥಾ ಭಜನೆ ಗಮನ ಸೆಳೆಯುತ್ತಿದೆ.

ಮಂಗಳವಾರದಿಂದ ನೂರಾರು ಸಮಾಜ ಬಾಂಧವರು ಮುಂಜಾನೆ ಹಾಗೂ ಸಂಜೆ ಮಂಚರಿಗಾಥಾ ಭಜನೆಯಲ್ಲಿ ತೊಡಗಿಕೊಂಡಿದ್ದಾರೆ. ಈ ವಿನೂತನ ಹಾಗೂ ವೈಶಿಷ್ಟ್ಯಪೂರ್ಣ ಭಜನೆಯ ಧ್ವನಿ ಪಟ್ಟಣದ ವಿವಿಧ ಭಾಗಗಳಲ್ಲಿ ಪ್ರತಿಧ್ವನಿಸುತ್ತಿದ್ದು, ಭಜನೆ ಆಲಿಸಲು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದಾರೆ.

ಕರ್ನಾಟಕದಲ್ಲಿ ಭಾವಸಾರ ಕ್ಷತ್ರೀಯ ಸಮಾಜದ ವತಿಯಿಂದ ಮಂಚರಿಗಾಥಾ ಭಜನೆ ಆಯೋಜಿಸುತ್ತಿರುವುದು ಇದೇ ಮೊದಲ ಬಾರಿಗೆ ಎನ್ನಲಾಗುತ್ತಿದ್ದು, ಸಮಾಜ ಬಾಂಧವರು ಅತ್ಯಂತ ಉತ್ಸಾಹ ಮತ್ತು ಭಕ್ತಿಭಾವದಿಂದ ಪಾಲ್ಗೊಳ್ಳುತ್ತಿದ್ದಾರೆ.

ಸುಮಾರು 537 ಅಭಂಗಗಳನ್ನು ಒಳಗೊಂಡಿರುವ ಮಂಚರಿಗಾಥಾ, ಸದ್ಗುರು ತುಕಾರಾಮ ಮಹಾರಾಜರು ಕೈಬರಹದಲ್ಲಿ ರಚಿಸಿರುವ ಅಮೂಲ್ಯ ಗ್ರಂಥವೆಂದು ತಿಳಿದುಬಂದಿದೆ.

ಈ ಗ್ರಂಥಕ್ಕೆ ವಿಶೇಷ ಧಾರ್ಮಿಕ ಹಿನ್ನೆಲೆಯಿದ್ದು, ಭಕ್ತಿಭಾವದಿಂದ ಇದರ ಪಾರಾಯಣ ಹಾಗೂ ಭಜನೆ ಮಾಡುವುದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ ಎಂಬ ನಂಬಿಕೆ ಭಕ್ತರಲ್ಲಿದೆ. ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ನಿಟ್ಟಿನಲ್ಲಿ ಮಂಚರಿಗಾಥಾವನ್ನು ಭಕ್ತಿಯಿಂದ ಅನುಷ್ಠಾನ ಮಾಡಿ ಭಜಿಸಿದರೆ ವಿಶೇಷ ಫಲ ದೊರೆಯುತ್ತದೆ ಎಂಬ ಧಾರ್ಮಿಕ ನಂಬಿಕೆಯೂ ಇದೆ. ವಾಶಿ ಕ್ಷೇತ್ರದಲ್ಲಿ ವಾಸಕರ ಮಹಾರಾಜರ ಮನೆಯಲ್ಲಿ ಈ ಅಪರೂಪದ ಗ್ರಂಥ ಇಂದಿಗೂ ಸಂರಕ್ಷಿಸಲ್ಪಟ್ಟಿದೆ ಎಂದು ಹೇಳಲಾಗುತ್ತಿದೆ.

ಲಕ್ಷ್ಮೇಶ್ವರದಲ್ಲಿ ಮಂಚರಿಗಾಥಾ ಭಜನೆ ಆಚರಿಸಲಾಗುತ್ತಿರುವುದು ಕರ್ನಾಟಕದಲ್ಲಿಯೇ ಪ್ರಥಮ ಎಂಬುದು ವಿಶೇಷವಾಗಿದೆ.

ಕಳೆದ ನಾಲ್ಕು ದಿನಗಳಿಂದ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ವಿಧಿವಿಧಾನಗಳು ಶಾಸ್ತ್ರೋಕ್ತವಾಗಿ ನಡೆಯುತ್ತಿದ್ದು, ಇದರೊಂದಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳೂ ಯಶಸ್ವಿಯಾಗಿ ನಡೆಯುತ್ತಿವೆ.

ಐದು ದಿನಗಳ ಕಾರ್ಯಕ್ರಮ ಶನಿವಾರ ಮುಕ್ತಾಯಗೊಳ್ಳಲಿದ್ದು, ಮಧ್ಯಾಹ್ನ 12.30ಕ್ಕೆ ದೇವಸ್ಥಾನದ ಆವರಣದಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ.

ಕೊಲ್ಹಾಪುರದ ವಾರಕರಿ ರತ್ನ ಹ.ಭ.ಪ. ತುಕಾರಾಮ ಪವಾರ ಸಾನ್ನಿಧ್ಯ ವಹಿಸಲಿದ್ದು, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಹಾಗೂ ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

### ವಿಬಿಜಿ ರಾಮ್ ಜಿ ಯೋಜನೆಯ ಸದುಪಯೋಗಕ್ಕೆ ಗ್ರಾಮೀಣ ಜನರಿಗೆ ಇಒ ಚಂದ್ರಶೇಖರ ಕಂದಕೂರ ಕರೆ

# ಕೆಲಸ ಬೇಕೇ? ನಮೂನೆ 6 ಸಲ್ಲಿಸಿ, ಜಾಬ್ ಕಾರ್ಡ್ ಪಡೆಯಿರಿ




**ವಿಜಯಸಾಕ್ಷಿ ಸುದ್ದಿ, ರೋಣ**

ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗದ ಅಗತ್ಯವಿರುವ ಕೂಲಿ ಕಾರ್ಮಿಕರು ಹಾಗೂ ಕುಟುಂಬಗಳು ಸರ್ಕಾರದ ವಿಬಿಜಿ ರಾಮ್ ಜಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ಉದ್ಯೋಗ ಪಡೆಯಲು ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಲ್ಲಿ ನಮೂನೆ6 ಸಲ್ಲಿಸಿ, ಜಾಬ್ ಕಾರ್ಡ್ ಮಾಡಿಸಿಕೊಳ್ಳುವಂತೆ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಕರೆ ನೀಡಿದ್ದಾರೆ.

ಗ್ರಾಮೀಣ ಜನರಿಗೆ ತಮ್ಮ ಊರಿನಲ್ಲಿಯೇ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಯೋಜನೆಯಡಿ ಗ್ರಾಮೀಣ ಕುಟುಂಬಗಳ ವಯಸ್ಕ ಸದಸ್ಯರು ಉದ್ಯೋಗ ಮಾಡಲು ಮುಂದೆ ಬಂದಲ್ಲಿ, ನಿಯಮಾನುಸಾರ ಕೂಲಿ ಆಧಾರಿತ ಉದ್ಯೋಗ ಒದಗಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಯೋಜನೆಯು ಗ್ರಾಮೀಣ ಕುಟುಂಬಗಳಿಗೆ ಆದಾಯದ ಮೂಲ ಕಲ್ಪಿಸುವುದರ ಜತೆಗೆ ಗ್ರಾಮಗಳ ಅಭಿವೃದ್ಧಿಗೂ ಸಹಕಾರಿಯಾಗಲಿದೆ. ಆದ್ದರಿಂದ ಉದ್ಯೋಗದ ಅಗತ್ಯವಿರುವ ಅರ್ಹರು ಯೋಜನೆಯ ಸೌಲಭ್ಯದಿಂದ ವಂಚಿತರಾಗಬಾರದು ಎಂದು ಮನವಿ ಮಾಡಿದ್ದಾರೆ. ಜಾಬ್ ಕಾರ್ಡ್ ಹೊಂದಿರುವ ಕುಟುಂಬದ ಸದಸ್ಯರು ಉದ್ಯೋಗ ಪಡೆಯಲು ಗ್ರಾಮ ಪಂಚಾಯಿತಿಯಲ್ಲಿ ನಮೂನೆ6 ಮೂಲಕ ಉದ್ಯೋಗದ ಬೇಡಿಕೆ ಸಲ್ಲಿಸುವುದು ಕಡ್ಡಾಯವಾಗಿದೆ. ಉದ್ಯೋಗದ ಅಗತ್ಯವಿದ್ದರೂ ಇನ್ನೂ ಜಾಬ್ ಕಾರ್ಡ್ ಮಾಡಿಸಿಕೊಳ್ಳದ ಕುಟುಂಬಗಳು ಕೂಡಲೇ ಸಂಬಂಧಪಟ್ಟ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

ಜಾಬ್ ಕಾರ್ಡ್ ಪಡೆದ ಬಳಿಕ ಕೆಲಸದ ಅಗತ್ಯವಿರುವ ಸಂದರ್ಭದಲ್ಲಿ ನಮೂನೆ6 ಸಲ್ಲಿಸುವ ಮೂಲಕ ಉದ್ಯೋಗಕ್ಕಾಗಿ ಬೇಡಿಕೆ ಸಲ್ಲಿಸಬಹುದಾಗಿದೆ. ಈ ಪ್ರಕ್ರಿಯೆಯ ಕುರಿತು ಗ್ರಾಮ ಪಂಚಾಯಿತಿ ಸಿಬ್ಬಂದಿಯಿಂದ ಅಗತ್ಯ ಮಾಹಿತಿ ಪಡೆಯಬಹುದು ಎಂದು ಹೇಳಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ, ಚರಂಡಿ, ಕೆರೆ ಅಭಿವೃದ್ಧಿ, ಜಲ ಸಂರಕ್ಷಣೆ, ಮಳೆ ನೀರು ಸಂಗ್ರಹಣೆ, ಕೃಷಿಗೆ ಸಂಬಂಧಿಸಿದ ಕಾಮಗಾರಿಗಳು ಹಾಗೂ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಗೆ ಪೂರಕವಾದ ವಿವಿಧ ಕಾಮಗಾರಿಗಳನ್ನು ಯೋಜನೆಯಡಿ ಕೈಗೆತ್ತಿಕೊಳ್ಳಲಾಗುತ್ತದೆ. ಈ ಕಾಮಗಾರಿಗಳ ಮೂಲಕ ಸ್ಥಳೀಯ ಗ್ರಾಮೀಣ ಜನರಿಗೆ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದ್ದು, ಉದ್ಯೋಗದ ಅಗತ್ಯವಿರುವವರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಕಂದಕೂರ ಹೇಳಿದರು. ಯೋಜನೆಯ ಸೌಲಭ್ಯ ಪಡೆಯಲು ಸಾರ್ವಜನಿಕರು ಯಾವುದೇ ಮಧ್ಯವರ್ತಿಗಳ ಮೊರೆ ಹೋಗದೆ ನೇರವಾಗಿ ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಬೇಕು. ಅರ್ಹ ಕುಟುಂಬಗಳಿಗೆ ಜಾಬ್ ಕಾರ್ಡ್ ನೀಡುವ ಪ್ರಕ್ರಿಯೆ ಹಾಗೂ ಉದ್ಯೋಗಕ್ಕಾಗಿ ಬೇಡಿಕೆ ಸಲ್ಲಿಸುವ ಕುರಿತು ಗ್ರಾಮ ಪಂಚಾಯಿತಿ ಸಿಬ್ಬಂದಿಯಿಂದ ಸಂಪೂರ್ಣ ಮಾಹಿತಿ ಪಡೆಯಬಹುದು ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗದ ಅಗತ್ಯವಿರುವ ಕುಟುಂಬಗಳನ್ನು ಗುರುತಿಸಿ ಅವರಿಗೆ ಯೋಜನೆಯ ಕುರಿತು ಮಾಹಿತಿ ನೀಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಅರ್ಹರಿಗೆ ಉದ್ಯೋಗ ದೊರಕಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಜಾಬ್ ಕಾರ್ಡ್ ಹೊಂದಿರುವ ಫಲಾನುಭವಿಗಳು ಕೆಲಸದ ಅಗತ್ಯವಿದ್ದಾಗ ತಪ್ಪದೇ ನಮೂನೆ6 ಸಲ್ಲಿಸುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.



> ಕೆಲಸ ಬೇಕಿರುವವರು ಅರ್ಜಿ ಸಲ್ಲಿಸಲು ಹಿಂಜರಿಯಬೇಡಿ. ಒಂದು ತಿಂಗಳ ಕಾಲ ನಡೆಯುವ ಜಾಬ್ ಕಾರ್ಡ್ ಮೇಳದ ಪ್ರಯೋಜನ ಪಡೆದು ಜಾಬ್ ಕಾರ್ಡ್ ಮಾಡಿಸಿಕೊಳ್ಳಿ. ನಂತರ ನಮೂನೆ6 ಸಲ್ಲಿಸಿ ಉದ್ಯೋಗಕ್ಕಾಗಿ ಬೇಡಿಕೆ ನೀಡಿ ಸರ್ಕಾರದ ಯೋಜನೆಯ ಸದುಪಯೋಗ ಪಡೆಯಿರಿ.
> – **ಚಂದ್ರಶೇಖರ ಬಿ. ಕಂದಕೂರ,**
> ಕಾರ್ಯನಿರ್ವಾಹಕ ಅಧಿಕಾರಿ, ರೋಣ ಹಾಗೂ ಗಜೇಂದ್ರಗಡ ತಾಲೂಕು

## ಸಂಕ್ಷಿಪ್ತ ಸುದ್ದಿಗಳು

# ಗದಗ ಜಿಪಂ ಸಿಇಒ ಆಗಿ ಮುಕುಲ್ ಜೈನ್ ವರ್ಗಾವಣೆ..!

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸರ್ಕಾರ ಆಡಳಿತಾತ್ಮಕ ಮಟ್ಟದಲ್ಲಿ ಅಧಿಕಾರಿಗಳ ವರ್ಗಾವಣೆ ಮಾಡಿ ಆದೇಶ ಹೊರಡಿಸಿದ್ದು, ಬೀದರ್ ನಗರ ಪಾಲಿಕೆ ಆಯುಕ್ತರಾಗಿದ್ದ ಮುಕುಲ್ ಜೈನ್, ಐಎಎಸ್ ಅವರನ್ನು ಗದಗ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ (ಸಿಇಒ) ವರ್ಗಾವಣೆ ಮಾಡಿ ನೇಮಕ ಮಾಡಲಾಗಿದೆ. ರಾಜ್ಯ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಈ ಸಂಬಂಧ ಆದೇಶ ಹೊರಡಿಸಿದೆ. ಈ ಆದೇಶದಲ್ಲಿ ಐಎಎಸ್ ಹಾಗೂ ಐಎಫ್ಎಸ್ ಅಧಿಕಾರಿಗಳಿಗೆ ವಿವಿಧ ಹುದ್ದೆಗಳಿಗೆ ವರ್ಗಾವಣೆ ಮತ್ತು ನೇಮಕಾತಿ ಮಾಡಲಾಗಿದೆ. 2022ನೇ ಬ್ಯಾಚ್‌ನ ಐಎಎಸ್ ಅಧಿಕಾರಿ ಮುಕುಲ್ ಜೈನ್ ಅವರು ಇದುವರೆಗೆ ಬೀದರ್ ನಗರ ಪಾಲಿಕೆ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದರು. ಇದೀಗ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಗದಗ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ. ಗದಗ ಜಿಲ್ಲಾ ಪಂಚಾಯತಿಯ ಸಿಇಒ ಹುದ್ದೆಯ ಹೆಚ್ಚುವರಿ ಪ್ರಭಾರವನ್ನು ನಿರ್ವಹಿಸುತ್ತಿದ್ದ ಸಿ.ಎನ್. ಶ್ರೀಧರ, ಐಎಎಸ್ ಅವರನ್ನು ಈ ಜವಾಬ್ದಾರಿಯಿಂದ ಬಿಡುಗಡೆ ಮಾಡಲಾಗಿದೆ. ನೂತನ ಸಿಇಒ ಆಗಿ ಮುಕುಲ್ ಜೈನ್ ನೇಮಕಗೊಂಡಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಪಂಚಾಯತಿಗೆ ಪೂರ್ಣಾವಧಿಯ ಆಡಳಿತಾತ್ಮಕ ಸಾರಥಿ ದೊರೆತಂತಾಗಿದೆ. ಈ ವರ್ಗಾವಣೆ ಆದೇಶದೊಂದಿಗೆ ಗದಗ ಜಿಲ್ಲೆಯ ಆಡಳಿತ ವ್ಯವಸ್ಥೆಯಲ್ಲೂ ಮಹತ್ವದ ಬದಲಾವಣೆಯಾಗಿದ್ದು, ಮುಕುಲ್ ಜೈನ್ ಅವರು ನೂತನ ಜಿಪಂ ಸಿಇಒ ಆಗಿ ಶೀಘ್ರದಲ್ಲೇ ಅಧಿಕಾರ ಸ್ವೀಕರಿಸಲಿದ್ದಾರೆ.

## ಲಕ್ಷ್ಮೇಶ್ವರ-ಶಿರಹಟ್ಟಿ-ಮುಂಡರಗಿ ಸೇರಿಸಲು ಗಡುವು | ಜಿಲ್ಲಾಧಿಕಾರಿ ಕಚೇರಿಗೆ ಬೀಗ ಹಾಕುವುದಾಗಿ ಎಚ್ಚರಿಕೆ

# ಎಂಟು ದಿನದಲ್ಲಿ ಬರ ಘೋಷಿಸಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕುಗಳನ್ನು ಬರಪೀಡಿತ ತಾಲೂಕುಗಳ ಪಟ್ಟಿಯಿಂದ ಕೈಬಿಟ್ಟಿರುವುದನ್ನು ಖಂಡಿಸಿ ರೈತರು ಭಾರೀ ಆಕ್ರೋಶ ವ್ಯಕ್ತಪಡಿಸಿದ್ದು, ಸಮಗ್ರ ರೈತ ಸಂಘಟನೆಗಳ ಒಕ್ಕೂಟ ಹಾಗೂ ವಿವಿಧ ರೈತ ಸಂಘಟನೆಗಳ ನೇತೃತ್ವದಲ್ಲಿ ಮಂಗಳವಾರ ಲಕ್ಷ್ಮೇಶ್ವರದಲ್ಲಿ ಕೈಗಾಇಳಕಲ್ ರಾಜ್ಯ ಹೆದ್ದಾರಿಯನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಲಾಯಿತು.

ಏಕಾಏಕಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ ಕೆಲಕಾಲ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿತು. ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಿದರು.

ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿ, ಮುಂಗಾರು ಮಳೆಯ ಕೊರತೆಯಿಂದ ಮೂರು ತಾಲೂಕುಗಳಲ್ಲಿಯೂ ಬೆಳೆಗಳು ಒಣಗುತ್ತಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೀಜ, ಗೊಬ್ಬರ, ಉಳುಮೆ ಹಾಗೂ ಕೂಲಿಗಾಗಿ ಮಾಡಿದ ವೆಚ್ಚವೂ ಮರಳಿ ಬಾರದಂತಹ ದುಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಅವರು ಖುದ್ದು ಬರ ಪರಿಸ್ಥಿತಿ ಪರಿಶೀಲಿಸಿ ಬರಪೀಡಿತ ತಾಲೂಕುಗಳ ಘೋಷಣೆಗೆ ಭರವಸೆ ನೀಡಿದ್ದರು. ಆದರೆ, ಶಿರಹಟ್ಟಿ ಕ್ಷೇತ್ರದ ಮೂರು ತಾಲೂಕುಗಳನ್ನು ಪಟ್ಟಿಯಿಂದ ಹೊರಗಿಡುವ ಮೂಲಕ ರೈತರಿಗೆ ಅನ್ಯಾಯ ಮಾಡಲಾಗಿದೆ ಎಂದು ಆರೋಪಿಸಿದರು.

ಪ್ರತಿಭಟನಾಕಾರರು ಮೂರು ತಾಲೂಕುಗಳನ್ನು ಕೂಡಲೇ ಬರಪೀಡಿತ ಎಂದು ಘೋಷಿಸಬೇಕು, ತಾಲೂಕುಗಳಾದ್ಯಂತ ಜಂಟಿ ಬೆಳೆನಷ್ಟ ಸಮೀಕ್ಷೆ ನಡೆಸಬೇಕು ಹಾಗೂ ಪ್ರತಿ ಎಕರೆಗೆ ಕನಿಷ್ಠ ₹50 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ರೈತರ ₹1 ಲಕ್ಷದವರೆಗಿನ ಕೃಷಿ ಸಾಲ ಮನ್ನಾ ಮಾಡಬೇಕು. ಬೆಳೆ ವಿಮೆ ಹಾಗೂ ಎಸ್‌ಡಿಆರ್‌ಎಫ್ ಪರಿಹಾರವನ್ನು ತ್ವರಿತವಾಗಿ ಬಿಡುಗಡೆ ಮಾಡಬೇಕು. ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು ಹಾಗೂ ಜಾನುವಾರುಗಳಿಗೆ ಮೇವು ಬ್ಯಾಂಕ್ ಆರಂಭಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಯಿತು.

ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸದ ದಿನಗಳನ್ನು ಹೆಚ್ಚಿಸಿ, ಕೂಲಿಯನ್ನು ಸಕಾಲದಲ್ಲಿ ಪಾವತಿಸುವ ಮೂಲಕ ಗ್ರಾಮೀಣ ಜನರ ಗುಳೆ ತಪ್ಪಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದೂ ರೈತರು ಒತ್ತಾಯಿಸಿದರು.

ಬಳಿಕ ಗ್ರೇಡ್2 ತಹಸೀಲ್ದಾರ್ ಮಂಜುನಾಥ ಅಮಾಸಿ ಅವರ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

> ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕುಗಳನ್ನು ಎಂಟು ದಿನಗಳೊಳಗೆ ಬರಪೀಡಿತ ಎಂದು ಘೋಷಿಸಿ ರೈತರ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲವಾದರೆ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಬೀಗ ಹಾಕುವುದರ ಜತೆಗೆ ಉಗ್ರ ಹೋರಾಟ ಹಾಗೂ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸಲಾಗುವುದು.
> **- ಎಂ.ಎಸ್. ದೊಡ್ಡಗೌಡರ,** ನ್ಯಾಯವಾದಿ

ಪ್ರತಿಭಟನೆಯಲ್ಲಿ ಹೊನ್ನಪ್ಪ ವಡ್ಡರ, ಐ.ಎಸ್. ಪೂಜಾರ, ಮುತ್ತುರಾಜ ರಾಠೋಡ, ಬಿ.ಟಿ. ಚಂದ್ರಶೇಖರ, ಮಹೇಶ ಹೊಗೆಸೊಪ್ಪಿನ, ನಾಗರಾಜ ಚಿಂಚಲಿ, ಸೋಮಣ್ಣ ಡಾಣಗಲ್, ಚನ್ನಪ್ಪ ಷಣ್ಮುಖಿ ಸೇರಿದಂತೆ ವಿವಿಧ ರೈತ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಹಾಗೂ ನೂರಾರು ರೈತರು ಪಾಲ್ಗೊಂಡಿದ್ದರು. ಸಿಪಿಐ ಬಿ.ವಿ. ನ್ಯಾಮಗೌಡರ ಹಾಗೂ ಪಿಎಸ್‌ಐ ಟಿ.ಕೆ. ರಾಠೋಡ ನೇತೃತ್ವದಲ್ಲಿ ಪೊಲೀಸರು ಸ್ಥಳದಲ್ಲಿ ಪರಿಸ್ಥಿತಿ ನಿಭಾಯಿಸಿದರು.

## ಗಣಿತ ಬಾಲ ಭಾಸ್ಕರ' ವಿದ್ಯಾರ್ಥಿಗಳ ಆತ್ಮವಿಶ್ವಾಸ ಹೆಚ್ಚಿಸುವ ವೇದಿಕೆ: ಕೃಷ್ಣಗೌಡ ಎಚ್. ಪಾಟೀಲ

# ಗಣಿತದ ಭಯ ಗೆದ್ದರೆ ಭವಿಷ್ಯದ ಸವಾಲೂ ಗೆಲ್ಲಬಹುದು




**ವಿಜಯಸಾಕ್ಷಿ ಸುದ್ದಿ, ಗದಗ**

ಗಣಿತವೆಂದರೆ ಭಯಪಡುವ ವಿಷಯವಲ್ಲ, ಅದು ಕುತೂಹಲ, ಚಿಂತನೆ ಹಾಗೂ ಹೊಸ ಸಾಧ್ಯತೆಗಳ ಜಗತ್ತು ಎಂಬ ಮನೋಭಾವವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವ ಉದ್ದೇಶದಿಂದ ಹಮ್ಮಿಕೊಂಡಿರುವ ಗಣಿತ ಬಾಲ ಭಾಸ್ಕರ' ಕಾರ್ಯಕ್ರಮವು ಶಾಲಾ ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಮಹತ್ವದ ವೇದಿಕೆಯಾಗಿದೆ ಎಂದು ಯುವ ಮುಖಂಡ ಕೃಷ್ಣಗೌಡ ಎಚ್. ಪಾಟೀಲ ಹೇಳಿದರು. ನಗರದ ಭೀಮಸೇನ ಜೋಶಿ ರಂಗಮಂದಿರದಲ್ಲಿ ನಡೆದ ಗಣಿತ ಬಾಲ ಭಾಸ್ಕರ' ಸೆಮಿಫೈನಲ್ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಎಚ್.ಕೆ. ಪಾಟೀಲ ಪ್ರತಿಷ್ಠಾನ, ಜಿ.ಎನ್.ಟಿ.ಟಿ.ಎಫ್ ಹಾಗೂ ಜಿ.ಸಿ.ಐ.ಇ ಸಂಸ್ಥೆಗಳ ಜಂಟಿ ಆಶ್ರಯದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮವು ಶಾಲಾ ಹಂತದಲ್ಲಿಯೇ ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸ್ಪರ್ಧಾತ್ಮಕ ವೇದಿಕೆ ಕಲ್ಪಿಸುತ್ತಿದೆ ಎಂದು ಹೇಳಿದರು. ಗಣಿತದ ಮೇಲಿನ ಭಯವನ್ನು ದೂರ ಮಾಡಿ, ವಿಷಯದ ಬಗ್ಗೆ ಆಸಕ್ತಿ ಮತ್ತು ಪ್ರೀತಿ ಬೆಳೆಸುವುದರ ಜತೆಗೆ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಕೌಶಲ್ಯ ಹಾಗೂ ಸವಾಲುಗಳನ್ನು ಎದುರಿಸುವ ಸಾಮರ್ಥ್ಯವನ್ನು ವೃದ್ಧಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

### ಗೆಲುವು-ಸೋಲಿಗಿಂತ ಅನುಭವ ಮುಖ್ಯ

ಎಚ್.ಕೆ. ಪಾಟೀಲ ಪ್ರತಿಷ್ಠಾನದ ನಿರ್ದೇಶಕ ಆನಂದ ಪೋತ್ನಿಸ್ ಪ್ರಾಸ್ತಾವಿಕವಾಗಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಗೆಲ್ಲುವುದು ಅಥವಾ ಸೋಲುವುದು ಮಾತ್ರ ಮುಖ್ಯವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳು ಪಡೆಯುವ ಹೊಸ ಅನುಭವ ಮತ್ತು ಕಲಿಕೆಯೇ ಅತ್ಯಂತ ಮಹತ್ವದ್ದು ಎಂದರು. ಕಾರ್ಯಕ್ರಮದ ಯಶಸ್ಸಿಗೆ ಗದಗ ಜಿಲ್ಲಾ ಶಿಕ್ಷಣ ಇಲಾಖೆ, ಗ್ರಾಮೀಣ ವೈದ್ಯಕೀಯ ಸೇವಾ ಸಂಸ್ಥೆ ಹಾಗೂ ಜೇಸಿ ಪ್ರೌಢಶಾಲೆಗಳ ಸಹಕಾರ ದೊರೆಯುತ್ತಿದೆ ಎಂದು ತಿಳಿಸಿದರು. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಸಹಜ ಪ್ರತಿಭೆ ಮತ್ತು ಕೌಶಲ್ಯ ಅಡಗಿರುತ್ತದೆ. ಸೂಕ್ತ ಅವಕಾಶ ದೊರೆತಾಗ ಆ ಪ್ರತಿಭೆಯನ್ನು ಗುರುತಿಸಿ ಹೊರತರಲು ಸಾಧ್ಯವಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಜೇಸಿ ಪ್ರೌಢಶಾಲೆಯ ಅಧ್ಯಕ್ಷ ವಾಸಣ್ಣ ಕುರುಡಗಿ, ಜಿ.ಎನ್.ಟಿ.ಟಿ.ಎಫ್ ಉಪಾಧ್ಯಕ್ಷ ಪ್ರಭು ದಂಡಾವತಿಮಠ, ಆರ್.ಆರ್. ಓದುಗೌಡರ ಸೇರಿದಂತೆ ಜಿ.ಎನ್.ಟಿ.ಟಿ.ಎಫ್ ಹಾಗೂ ಜಿ.ಸಿ.ಐ.ಇ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು. ಸೌಮ್ಯಾ ಪಾಟೀಲ ನಿರೂಪಿಸಿದರು. ಮಧುಸೂಧನ ಪುಣೇಕರ ವಂದಿಸಿದರು.

> ಗಣಿತದ ಭಯವನ್ನು ಬಿಟ್ಟು ಗಣಿತದೊಂದಿಗೆ ಸ್ನೇಹ ಬೆಳೆಸೋಣ. ಇಂದಿನ ಆತ್ಮವಿಶ್ವಾಸವೇ ನಾಳಿನ ಯಶಸ್ಸಿನ ಮೆಟ್ಟಿಲಾಗಬೇಕು. ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಂಡು, ಪ್ರತಿಯೊಂದು ಅವಕಾಶವನ್ನೂ ಬಳಸಿಕೊಂಡು ಸ್ಪರ್ಧಾತ್ಮಕ ಭವಿಷ್ಯದತ್ತ ಹೆಜ್ಜೆ ಹಾಕಬೇಕು.
> **- ಕೃಷ್ಣಗೌಡ ಎಚ್. ಪಾಟೀಲ**

# ಕೃಷಿಕರ ಪ್ರಗತಿಗೆ 1,150 ಕೋಟಿ ರೂ. ಸಾಲ: ತಿಪ್ಪೇಸ್ವಾಮಿ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕೃಷಿ ಕ್ಷೇತ್ರದ ಪ್ರಗತಿಗಾಗಿ ಬಿಡಿಸಿಸಿ ಬ್ಯಾಂಕ್ 1,150 ಕೋಟಿ ರೂ. ಕೃಷಿ ಸಾಲ ನೀಡುವುದರ ಜತೆಗೆ ಗುಡಿ ಕೈಗಾರಿಕೆ, ವ್ಯಾಪಾರ ಸೇರಿದಂತೆ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೂ ಸಾಲ ಸೌಲಭ್ಯ ಕಲ್ಪಿಸುತ್ತಿದೆ ಎಂದು ಬ್ಯಾಂಕ್ ಅಧ್ಯಕ್ಷ ಗುಂಡುಮುಣಗು ತಿಪ್ಪೇಸ್ವಾಮಿ ಹೇಳಿದರು. ತಾಲೂಕಿನ ತಂಬ್ರಹಳ್ಳಿಯಲ್ಲಿ ಬಿಡಿಸಿಸಿ ಬ್ಯಾಂಕ್ ನೂತನ ಶಾಖೆಗೆ ಚಾಲನೆ ನೀಡಿ ಅವರು ಮಾತನಾಡಿದರು. ರೈತರ ಬೇಡಿಕೆಗೆ ಅನುಗುಣವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಬ್ಯಾಂಕ್ ಶಾಖೆಗಳನ್ನು ಆರಂಭಿಸಲಾಗುತ್ತಿದ್ದು, ರೈತರು ಹಾಗೂ ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಬ್ಯಾಂಕ್ ಉಪಾಧ್ಯಕ್ಷ ದ್ವಾರಕೇಶ, ನಿರ್ದೇಶಕರು ಹಾಗೂ ವಿವಿಧ ಮುಖಂಡರು ಉಪಸ್ಥಿತರಿದ್ದರು.

## ಜಯಂತ್ಯುತ್ಸವದೊಂದಿಗೆ ಕುರಿಗಾಯಿಗಳ ಸಂಘಕ್ಕೆ ಚಾಲನೆ

# ರಾಯಣ್ಣನ ದೇಶಪ್ರೇಮ ಯುವಜನತೆಗೆ ಆದರ್ಶ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬ್ರಿಟಿಷರ ಗುಲಾಮಗಿರಿಯ ವಿರುದ್ಧ ಸಿಡಿದೆದ್ದು ಹೋರಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಜೀವನ ಯುವಜನತೆಗೆ ದೇಶಪ್ರೇಮ, ಸ್ವಾಭಿಮಾನ ಮತ್ತು ತ್ಯಾಗದ ಮಹತ್ತರ ಸಂದೇಶ ನೀಡುತ್ತದೆ ಎಂದು ಕಾಂಗ್ರೆಸ್ ಯುವ ಮುಖಂಡ ವಿನೋದ ಅಸೂಟಿ ಹೇಳಿದರು.

ಪಟ್ಟಣದ ಹಳೇ ಬಸ್ ನಿಲ್ದಾಣ ಸಮೀಪದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿ ಆಯೋಜಿಸಿದ್ದ ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತೋತ್ಸವ ಹಾಗೂ ಅಮೋಘ ಸಿದ್ದೇಶ್ವರ ಅರೆ ಅಲೆಮಾರಿ ಕುರಿಗಾಯಿಗಳ ವಿವಿಧೋದ್ದೇಶಗಳ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ರಾಯಣ್ಣ ಇಂದು ನಮ್ಮೊಂದಿಗೆ ಇಲ್ಲದಿದ್ದರೂ ಅವರ ಸ್ವಾಭಿಮಾನದ ಹೋರಾಟ, ಅಪ್ರತಿಮ ದೇಶಭಕ್ತಿ ಹಾಗೂ ನಾಡಿನ ಮೇಲಿನ ಪ್ರೀತಿ ಇಂದಿಗೂ ಜನರ ಹೃದಯಗಳಲ್ಲಿ ಜೀವಂತವಾಗಿದೆ. ಕೇವಲ ಜಯಂತಿ ಆಚರಿಸುವುದರಿಂದ ಅವರಿಗೆ ಗೌರವ ಸಲ್ಲಿಸಿದಂತಾಗುವುದಿಲ್ಲ. ಅವರಲ್ಲಿದ್ದ ನಿಸ್ವಾರ್ಥ ದೇಶಭಕ್ತಿ, ಧೈರ್ಯ, ತ್ಯಾಗ ಮತ್ತು ನಾಡಿನ ಮೇಲಿನ ಅಭಿಮಾನವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಪರಿಚಯಿಸುವುದೇ ನಿಜವಾದ ಗೌರವ ಎಂದು ಹೇಳಿದರು.

ಹುಲ್ಲೂರು ಅಮೋಘಿಮಠದ ಸಿದ್ದಯ್ಯ ಅಮೋಘಿಮಠ ಸಾನಿಧ್ಯ ವಹಿಸಿದ್ದರು.

> ಸಂಗೊಳ್ಳಿ ರಾಯಣ್ಣನ ಧೈರ್ಯ, ತ್ಯಾಗ ಮತ್ತು ದೇಶಪ್ರೇಮವನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ.
> **- ವಿನೋದ ಅಸೂಟಿ**

ಕಾರ್ಯಕ್ರಮದಲ್ಲಿ ರಾಯಣ್ಣ ಅಭಿಮಾನಿ ಬಳಗದ ರಾಜ್ಯಾಧ್ಯಕ್ಷ ಸುರೇಶ ಗೋಕಾಕ, ಕುರಿಗಾಯಿಗಳ ವಿವಿಧೋದ್ದೇಶಗಳ ಸಂಘದ ಅಧ್ಯಕ್ಷ ಶೇಖಪ್ಪ ಬಿಂಗಿ, ಶಿರಡಿ ಸಾಯಿಬಾಬಾ ಮಂದಿರದ ಧರ್ಮದರ್ಶಿ ಸಿದ್ದಲಿಂಗಯ್ಯ ಶ್ರೀಗಳು, ಮಹೇಶ ಲಮಾಣಿ, ಬಸವರಾಜ ಹಿರೇಮನಿ, ಸುರೇಶ ಹಟ್ಟಿ, ಭರಮಪ್ಪ ಶೆರಸೂರಿ, ಮಂಜುನಾಥ ಮುಳಗುಂದ, ತಿಪ್ಪಣ್ಣ ಸಂಶಿ, ಐ.ಎಸ್. ಪೂಜಾರ, ಗುರುನಾಥ ದಾನಪ್ಪನವರ, ಲೆಂಕಪ್ಪ ಶೆರಸೂರಿ, ಸಮ್ಮೇದ ಗೋಗಿ, ಫಕ್ಕೀರೇಶ ಮ್ಯಾಟನ್ನವರ, ಶೇಖಣ್ಣ ಕಾಳೆ, ಸೋಮಣ್ಣ ಉಪನಾಳ, ಸುರೇಶ ನಂದೆನ್ನವರ, ಮೌಲಾಲಿ ಮುಲ್ಲಾ ಹಾಗೂ ಹನಮಂತಪ್ಪ ಹುರಕಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮಹೇಶ ಹಾರೋಗೇರಿ ಕಾರ್ಯಕ್ರಮ ನಿರ್ವಹಿಸಿದರು.

# ಸಿಹಿ ಭೋಜನದೊಂದಿಗೆ ಸರ್ಕಾರಿ ಶಾಲೆಗೆ ಮಕ್ಕಳ ಸೆಳೆತ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರ್ಕಾರಿ ಶಾಲೆಗಳತ್ತ ಮಕ್ಕಳನ್ನು ಆಕರ್ಷಿಸುವ ವಿನೂತನ ಉದ್ದೇಶದಿಂದ ತಾಲೂಕಿನ ಗೋವನಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರಾವಣ ಸಿರಿಸಿಹಿ ಭೋಜನ' ಕಾರ್ಯಕ್ರಮ ಸತತ ಐದು ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿದೆ. ಶಾಲೆಯ 1ರಿಂದ 8ನೇ ತರಗತಿಯ 86 ವಿದ್ಯಾರ್ಥಿಗಳಿಗೆ ಶ್ರಾವಣ ಮಾಸದುದ್ದಕ್ಕೂ ಮಧ್ಯಾಹ್ನದ ಬಿಸಿಯೂಟದೊಂದಿಗೆ ವಿವಿಧ ಬಗೆಯ ಸಿಹಿ ತಿನಿಸುಗಳನ್ನು ನೀಡಲಾಗುತ್ತಿದೆ. ಜಿಲೇಬಿ, ಬೂಂದಿ, ಮೈಸೂರು ಪಾಕ್, ಪಾಯಸ, ಕೇಸರಿಬಾತ್ ಹಾಗೂ ಹೋಳಿಗೆ ಸೇರಿದಂತೆ ಪ್ರತಿದಿನ ವಿಭಿನ್ನ ಸಿಹಿ ತಿನಿಸುಗಳನ್ನು ಮಕ್ಕಳಿಗೆ ಸಿದ್ಧಪಡಿಸಿ ನೀಡುತ್ತಿರುವುದು ವಿಶೇಷವಾಗಿದೆ.

ಗ್ರಾಮಸ್ಥರು, ದಾನಿಗಳು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು, ಎಸ್‌ಡಿಎಂಸಿ ಹಾಗೂ ಶಿಕ್ಷಕರ ಸಹಕಾರದಿಂದ ಶ್ರಾವಣ ಮಾಸದುದ್ದಕ್ಕೂ ಈ ಸಿಹಿಯೂಟ ಕಾರ್ಯಕ್ರಮ ನಡೆಯುತ್ತಿದೆ.

ಸಿಹಿ ಭೋಜನದ ಜತೆಗೆ ಪ್ರತಿಭಾ ಕಾರಂಜಿ, ಕ್ರೀಡಾಕೂಟ ಹಾಗೂ ನಲಿಕಲಿ ಚಟುವಟಿಕೆಗಳನ್ನು ಆಯೋಜಿಸುವ ಮೂಲಕ ಮಕ್ಕಳಲ್ಲಿ ಶಾಲೆಯ ಬಗ್ಗೆ ಆಸಕ್ತಿ ಮೂಡಿಸಲಾಗುತ್ತಿದೆ. ಈ ವಿನೂತನ ಪ್ರಯತ್ನದಿಂದ ಸರ್ಕಾರಿ ಶಾಲೆಯತ್ತ ಮಕ್ಕಳ ಸೆಳೆತ ಹೆಚ್ಚಿಸುವ ಉದ್ದೇಶವನ್ನು ಶಾಲೆ ಯಶಸ್ವಿಯಾಗಿ ಮುಂದುವರಿಸಿಕೊಂಡು ಬಂದಿದೆ.

ಜಿಲ್ಲಾ ಉಪನಿರ್ದೇಶಕ ಆರ್.ಎಸ್. ಬುರಡಿ ಶಾಲೆಯ ಈ ವಿಶೇಷ ಕಾರ್ಯಕ್ರಮವನ್ನು ಮೆಚ್ಚಿ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಸಮುದಾಯದ ಸಹಕಾರ ಪಡೆದು ಇಂತಹ ವಿನೂತನ ಚಟುವಟಿಕೆಗಳನ್ನು ನಡೆಸುತ್ತಿರುವುದು ಶ್ಲಾಘನೀಯ ಎಂದು ಅಭಿಪ್ರಾಯಪಟ್ಟರು.

ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಶಿಮೀಕೇರಿ, ಅಕ್ಷರ ದಾಸೋಹ ಸಹ ನಿರ್ದೇಶಕ ಎಚ್.ಎಸ್. ರಾಮನಗೌಡ, ಪ್ರಧಾನ ಗುರು ಎಸ್.ಪಿ. ಕಟ್ಟೆನ್ನವರ ಹಾಗೂ ಶಿಕ್ಷಕ ಬಿ.ಬಿ. ಯತ್ತಿನಹಳ್ಳಿ ಸೇರಿದಂತೆ ಇತರರು ಕಾರ್ಯಕ್ರಮದ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

## ರಾಷ್ಟ್ರ-ಅಂತರರಾಷ್ಟ್ರೀಯ ಸಾಧನೆಗೆ ಮೂಲಸೌಕರ್ಯವೇ ಶಕ್ತಿ: ಆಸೂಟಿ

# ಗದಗ ಕ್ರೀಡಾಪಟುಗಳಿಗೆ ಸಿಕ್ಕಿದೆ ಬಲಿಷ್ಠ ವೇದಿಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕ್ರೀಡಾ ಕ್ಷೇತ್ರದಲ್ಲಿ ಗದಗ ಜಿಲ್ಲೆ ತನ್ನದೇ ಆದ ವಿಶಿಷ್ಟ ಛಾಪು ಮೂಡಿಸಿದ್ದು, ಹಲವು ಪ್ರತಿಭಾವಂತ ಕ್ರೀಡಾಪಟುಗಳನ್ನು ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟಕ್ಕೆ ನೀಡಿದೆ. ಜಿಲ್ಲೆಯ ಯುವ ಕ್ರೀಡಾ ಪ್ರತಿಭೆಗಳಿಗೆ ಮತ್ತಷ್ಟು ಉತ್ತೇಜನ ನೀಡಲು ಅಗತ್ಯವಾದ ಉತ್ತಮ ಮೂಲಸೌಕರ್ಯಗಳು ನಿರ್ಮಾಣಗೊಂಡಿವೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ನಗರದ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಮೇಜರ್ ಧ್ಯಾನಚಂದ್ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಾಕಿ ದಿಗ್ಗಜ ಮೇಜರ್ ಧ್ಯಾನಚಂದ್ ಅವರ ಸಾಧನೆಯನ್ನು ಸ್ಮರಿಸಿದ ಅವರು, ಗದಗಬೆಟಗೇರಿ ಅವಳಿ ನಗರಕ್ಕೂ ಹಾಕಿ ಕ್ರೀಡೆಗೂ ಐತಿಹಾಸಿಕ ನಂಟಿದೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾರತವನ್ನು ಪ್ರತಿನಿಧಿಸಿದ ಬೇಣು ಭಟ್, ರಾಜೀವ್ ಬಾಂಗ್ಲೆ ಹಾಗೂ ಸುನಿಲ್ ಜೋಶಿ ಅವರಂತಹ ಅಪ್ರತಿಮ ಕ್ರೀಡಾಪಟುಗಳನ್ನು ನೀಡಿದ ಹೆಮ್ಮೆ ಗದಗ ಜಿಲ್ಲೆಗಿದೆ ಎಂದರು.

ಗದಗದಲ್ಲಿ ಅತ್ಯಾಧುನಿಕ ಒಳಾಂಗಣ ಕ್ರೀಡಾಂಗಣ ನಿರ್ಮಾಣಗೊಂಡಿದ್ದು, ಬೆಂಗಳೂರನ್ನು ಹೊರತುಪಡಿಸಿದರೆ ರಾಜ್ಯದಲ್ಲಿಯೇ ಎರಡನೇ ಅತಿದೊಡ್ಡ ಒಳಾಂಗಣ ಕ್ರೀಡಾಂಗಣ ಗದಗದಲ್ಲಿರುವುದು ಜಿಲ್ಲೆಯ ಕ್ರೀಡಾಪಟುಗಳಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

> ಗದಗ ಜಿಲ್ಲೆಯಲ್ಲಿ ಕ್ರೀಡಾ ಪ್ರತಿಭೆಗಳಿಗೆ ಯಾವುದೇ ಕೊರತೆಯಿಲ್ಲ. ಸೂಕ್ತ ಅವಕಾಶ, ತರಬೇತಿ ಮತ್ತು ಪ್ರೋತ್ಸಾಹ ದೊರೆತರೆ ಜಿಲ್ಲೆಯ ಇನ್ನಷ್ಟು ಯುವ ಕ್ರೀಡಾಪಟುಗಳು ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ ಗದಗದ ಕೀರ್ತಿಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಲಿದ್ದಾರೆ.
> **- ಬಿ.ಬಿ. ಆಸೂಟಿ**

ಗದಗದ ಯುವಕರು ಹಾಕಿ ಮಾತ್ರವಲ್ಲದೆ ಸೈಕ್ಲಿಂಗ್, ಕುಸ್ತಿ, ಅಥ್ಲೆಟಿಕ್ಸ್, ವಾಲಿಬಾಲ್, ಕಬಡ್ಡಿ ಹಾಗೂ ಕರಾಟೆ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ರಾಷ್ಟ್ರಮಟ್ಟದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿದ್ದಾರೆ. ಇಂತಹ ಪ್ರತಿಭೆಗಳಿಗೆ ಸೂಕ್ತ ತರಬೇತಿ, ಪ್ರೋತ್ಸಾಹ ಮತ್ತು ಅಗತ್ಯ ಮೂಲಸೌಕರ್ಯ ಕಲ್ಪಿಸಿದರೆ ಇನ್ನಷ್ಟು ಕ್ರೀಡಾಪಟುಗಳು ಉನ್ನತ ಮಟ್ಟದಲ್ಲಿ ಹೊರಹೊಮ್ಮಲಿದ್ದಾರೆ ಎಂದು ತಿಳಿಸಿದರು.


ಸರ್ಕಾರ ನಿರ್ಮಿಸಿರುವ ಕ್ರೀಡಾಂಗಣಗಳನ್ನು ಸಮರ್ಪಕವಾಗಿ ಬಳಸಿಕೊಂಡು ಅವುಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು. ಪೋಷಕರು ಮಕ್ಕಳನ್ನು ಕ್ರೀಡಾ ಕ್ಷೇತ್ರದತ್ತ ಪ್ರೋತ್ಸಾಹಿಸುವ ಮೂಲಕ ಅವರ ದೈಹಿಕ ಮತ್ತು ಮಾನಸಿಕ ಸದೃಢತೆಗೆ ಒತ್ತು ನೀಡಬೇಕು ಎಂದು ಸಲಹೆ ನೀಡಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ಹಾಕಿ ಪಂದ್ಯಗಳಿಗೆ ಚಾಲನೆ ನೀಡಿ ಮಾತನಾಡಿ, ಜಿಲ್ಲೆಯಲ್ಲಿ ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯದಲ್ಲಿಯೇ ಮಾದರಿಯಾಗುವಂತಹ ಮಹತ್ವದ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದರು. ಕಬಡ್ಡಿ, ಕುಸ್ತಿ, ಹಾಕಿ, ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡೆಗಳಿಗೆ ಅಗತ್ಯವಿರುವ ಸುಸಜ್ಜಿತ ಕ್ರೀಡಾಂಗಣಗಳು ಹಾಗೂ ಮೂಲಸೌಕರ್ಯಗಳನ್ನು ನಿರ್ಮಿಸಲಾಗಿದ್ದು, ಕ್ರೀಡಾಪಟುಗಳಿಗೆ ಉತ್ತಮ ತರಬೇತಿ ಮತ್ತು ಅಭ್ಯಾಸಕ್ಕೆ ಅನುಕೂಲಕರ ವಾತಾವರಣ ಕಲ್ಪಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಎಚ್.ಬಿ. ವೀರಾಪುರ, ವಾಯ್.ಜಿ. ಗಡದ, ಸುರೇಶ್ ಕಟ್ಟಿಮನಿ, ಮಾರುತಿ ಮುಟಗಾರ, ವಸಂತ ಕಲಕಾಂಬಿ, ಡಾ. ಪ್ರವೀಣ ಚಪ್ಪರಮನಿ, ಮಂಜುನಾಥ ಬಾಗಲಕೋಟಿ, ಶಿವರಾಜ ಕೊರಶ್, ವಿಶ್ವಾಸ ಗಂಗಡೆ, ವಾಯ್.ಕೆ. ಚೌಡಾಪುರ, ಲಕ್ಷ್ಮಣ ಬಾಗಲಕೋಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಬಾಹುಬಲಿ ಜೈನ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಗದಗ ಎಸ್‌ಪಿ ರೋಹನ್ ಜಗದೀಶ್ ವರ್ಗಾವಣೆ; ಮಿಥುನ್ ನೂತನ ಎಸ್ಪಿ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸರ್ಕಾರ ಪೊಲೀಸ್ ಇಲಾಖೆಯಲ್ಲಿ ಮಹತ್ವದ ವರ್ಗಾವಣೆ ನಡೆಸಿದ್ದು, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಐಪಿಎಸ್ ಅವರನ್ನು ವರ್ಗಾವಣೆ ಮಾಡಿ ಬೆಂಗಳೂರು ದಕ್ಷಿಣ ಜಿಲ್ಲೆಯ (ರಾಮನಗರ) ಪೊಲೀಸ್ ವರಿಷ್ಠಾಧಿಕಾರಿಯಾಗಿ ನೇಮಕ ಮಾಡಿ ಆದೇಶ ಹೊರಡಿಸಿದೆ.

ಅವರ ಸ್ಥಾನಕ್ಕೆ ಮಂಗಳೂರು ನಗರ ಪೊಲೀಸ್ ಇಲಾಖೆಯಲ್ಲಿ ಡಿಸಿಪಿ (ಕಾನೂನು ಮತ್ತು ಸುವ್ಯವಸ್ಥೆ) ಆಗಿ ಕಾರ್ಯನಿರ್ವಹಿಸುತ್ತಿದ್ದ ಮಿಥುನ್ ಎಚ್.ಎನ್., ಐಪಿಎಸ್ ಅವರನ್ನು ಗದಗ ಜಿಲ್ಲೆಯ ನೂತನ ಪೊಲೀಸ್ ವರಿಷ್ಠಾಧಿಕಾರಿಯಾಗಿ ನೇಮಕ ಮಾಡಲಾಗಿದೆ.

ಗದಗ ಜಿಲ್ಲೆಯಲ್ಲಿ ಎಸ್‌ಪಿಯಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ರೋಹನ್ ಜಗದೀಶ್ ಅವರು ತಮ್ಮ ವಿಶಿಷ್ಟ ಕಾರ್ಯವೈಖರಿ ಹಾಗೂ ಖಡಕ್ ಕ್ರಮಗಳಿಂದ ಗಮನ ಸೆಳೆದಿದ್ದರು. ವಿಶೇಷವಾಗಿ ರೌಡಿ ಶೀಟರ್‌ಗಳು ಮತ್ತು ಅಪರಾಧ ಚಟುವಟಿಕೆಗಳಲ್ಲಿ ತೊಡಗಿದ್ದವರಿಗೆ ಸಿಂಹಸ್ವಪ್ನವಾಗಿದ್ದ ಅವರು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದ್ದರು.

ಅಪರಾಧಿಗಳ ವಿರುದ್ಧ ಖಡಕ್ ನಿಲುವು ತಳೆದಿದ್ದ ರೋಹನ್ ಜಗದೀಶ್ ಅವರು, ಸಾರ್ವಜನಿಕರೊಂದಿಗೆ ಮಾತ್ರ ಅತ್ಯಂತ ಆತ್ಮೀಯ ಹಾಗೂ ಸ್ನೇಹಪರವಾಗಿ ವರ್ತಿಸುತ್ತಿದ್ದರು. ಯಾವಾಗಲೂ ನಗುಮೊಗದಿಂದ, ಹಸನ್ಮುಖಿಯಾಗಿ ಸಾರ್ವಜನಿಕರನ್ನು ಎದುರಿಸುತ್ತಿದ್ದ ಅವರ ಸರಳ ನಡೆ ಜನರ ಮೆಚ್ಚುಗೆಗೆ ಪಾತ್ರವಾಗಿತ್ತು. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಪೊಲೀಸ್ ಇಲಾಖೆ ಮತ್ತು ಸಾರ್ವಜನಿಕರ ನಡುವಿನ ಅಂತರವನ್ನು ಕಡಿಮೆ ಮಾಡುವ ಪ್ರಯತ್ನವನ್ನೂ ಅವರು ನಡೆಸಿದ್ದರು.

ಒಂದೆಡೆ ಅಪರಾಧಿಗಳ ವಿರುದ್ಧ ಕಠಿಣ ಕ್ರಮ, ಮತ್ತೊಂದೆಡೆ ಸಾರ್ವಜನಿಕರೊಂದಿಗೆ ಸ್ನೇಹಪರ ನಡೆಈ ಎರಡು ವಿಭಿನ್ನ ಮುಖಗಳ ಕಾರ್ಯವೈಖರಿಯಿಂದ ರೋಹನ್ ಜಗದೀಶ್ ಅವರು ಗದಗ ಜಿಲ್ಲೆಯ ಜನತೆಯ ಗಮನ ಸೆಳೆದಿದ್ದರು.

ಇದೀಗ ಸರ್ಕಾರದ ವರ್ಗಾವಣೆ ಆದೇಶದಂತೆ ಅವರು ರಾಮನಗರದಲ್ಲಿ ಹೊಸ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ.

ಇನ್ನು ಗದಗ ಜಿಲ್ಲೆಯ ನೂತನ ಪೊಲೀಸ್ ವರಿಷ್ಠಾಧಿಕಾರಿಯಾಗಿ ನೇಮಕಗೊಂಡಿರುವ ಮಿಥುನ್ ಎಚ್.ಎನ್. ಅವರು 2020ರ ಬ್ಯಾಚ್‌ನ ಕರ್ನಾಟಕ ಕೇಡರ್ ಐಪಿಎಸ್ ಅಧಿಕಾರಿಯಾಗಿದ್ದಾರೆ. ಈ ಹಿಂದೆ ವಿವಿಧ ಪೊಲೀಸ್ ಹುದ್ದೆಗಳಲ್ಲಿ ಸೇವೆ ಸಲ್ಲಿಸಿರುವ ಅವರು, ಸಕಲೇಶಪುರದಲ್ಲಿ ಸಹಾಯಕ ಪೊಲೀಸ್ ವರಿಷ್ಠಾಧಿಕಾರಿಯಾಗಿ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿದ ಅನುಭವ ಹೊಂದಿದ್ದಾರೆ.

ಮಂಗಳೂರು ನಗರ ಪೊಲೀಸ್ ಇಲಾಖೆಯಲ್ಲಿ ಡಿಸಿಪಿ (ಕಾನೂನು ಮತ್ತು ಸುವ್ಯವಸ್ಥೆ) ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಮಿಥುನ್ ಎಚ್.ಎನ್. ಅವರನ್ನು ಇದೀಗ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ನೇಮಕ ಮಾಡಲಾಗಿದೆ. ರೌಡಿ ಶೀಟರ್‌ಗಳಿಗೆ ಸಿಂಹಸ್ವಪ್ನವಾಗಿದ್ದರೂ, ಸಾರ್ವಜನಿಕರೊಂದಿಗೆ ನಗುಮೊಗದ ಹಸನ್ಮುಖಿ ಅಧಿಕಾರಿಯಾಗಿ ಗುರುತಿಸಿಕೊಂಡಿದ್ದ ರೋಹನ್ ಜಗದೀಶ್ ಅವರ ವರ್ಗಾವಣೆಯೊಂದಿಗೆ ಗದಗ ಜಿಲ್ಲೆಗೆ ನೂತನ ಪೊಲೀಸ್ ಸಾರಥಿಯಾಗಿ ಮಿಥುನ್ ಎಚ್.ಎನ್. ಆಗಮಿಸುತ್ತಿದ್ದು, ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಹೊಸ ಅಧ್ಯಾಯ ಆರಂಭವಾಗಿದೆ.

# ವಸತಿ ನಿಲಯಗಳಿಗೆ ನೋಂದಣಿ ಕಡ್ಡಾಯ; ಸೆ.25 ಕೊನೆಯ ದಿನ!

**ವಿಜಯಸಾಕ್ಷಿ ಸುದ್ದಿ, ಗದಗ**

6ರಿಂದ 18 ವರ್ಷದೊಳಗಿನ ಮಕ್ಕಳ ಸುರಕ್ಷತೆ ಹಾಗೂ ಅವರಿಗೆ ಕಲ್ಪಿಸಲಾಗುತ್ತಿರುವ ಸೌಲಭ್ಯಗಳ ಮೇಲ್ವಿಚಾರಣೆಗೆ ರಾಜ್ಯ ಸರ್ಕಾರ ಹೊಸ ಮಾರ್ಗಸೂಚಿಗಳನ್ನು ಜಾರಿಗೊಳಿಸಿದ್ದು, ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯ, ವಸತಿ ಶಾಲೆ, ಕಾಲೇಜು, ತರಬೇತಿ ಕೇಂದ್ರ, ಹಾಗೂ ಧಾರ್ಮಿಕ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಬೇಕಾಗಿದೆ. ಕರ್ನಾಟಕದಲ್ಲಿ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿರುವ ಸ್ವತಂತ್ರ ವಸತಿ ನಿಲಯಗಳ ನಿಯಂತ್ರಣಕ್ಕೆ ಸಂಬಂಧಿಸಿದ ಕಾರ್ಯವಿಧಾನ ಮಾರ್ಗಸೂಚಿಗಳನ್ನು ಸರ್ಕಾರ ಜಾರಿಗೊಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿ ಅಥವಾ ಸಂಬಂಧಪಟ್ಟ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka